ಸಂಪುಟ : 9 ಸಂಚಿಕೆ 100 ಪುಟ : 4 ಬೆಲೆ: 3.00 ಬುಧವಾರ ಮೇ 22 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 100 Pages : 4 Price : 3.00 Wednesday May 22 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಡೆಂಗೀ ಜನಜಾಗೃತಿ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ಡೆಂಗೀ ದಿನದ ಪ್ರಯುಕ್ತ ಮೇ 22ರಂದು ಬೆಳಿಗ್ಗೆ 9 ಗಂಟೆಗೆ ನಗರದ ಗಾಂಧೀ ವೃತ್ತ, ಹಳೆ ಜಿಲ್ಲಾ ಆಸ್ಪತ್ರೆ ಕಾರ್ಯಾಲಯದಿಂದ ಜಿಲ್ಲಾ ಮಟ್ಟದ ಮಾನವ ಸರಪಳಿ ಪ್ರದರ್ಶನ ಜನಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ರೋಗ ವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಖರೀದಿ ಪ್ರಕ್ರಿಯೆ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2023–24ನೇ ಸಾಲಿಗೆ ಜಿಲ್ಲೆಯಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಹಿಂಗಾರು ಜೋಳ ಖರೀದಿಗೆ ಖರೀದಿ ಕೇಂದ್ರಗಳನ್ನು ತೆರೆದು ರೈತರಿಂದ ನೋಂದಣಿ ಕಾರ್ಯವನ್ನು ಪ್ರಾರಂಭಿಸಿ ಖರೀದಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದ್ದು, ಖರೀದಿ ಪ್ರಕ್ರಿಯೆಯನ್ನು ಜೂನ್ 30ರವರೆಗೆ ವಿಸ್ತರಿಸಲಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಪ್ರಕಟಣೆ ತಿಳಿಸಿದೆ.

## ಮೇ 23ರಂದು ಮಾಂಸ ಮಾರಾಟ ನಿಷೇಧ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ನಗರಸಭೆ ವ್ಯಾಪ್ತಿಯ ಖಸಾಯಿ ಖಾನೆಗಳಲ್ಲಿ ಪ್ರಾಣಿವಧೆ ಮಾಡುವ ಹಾಗೂ ಮಾಂಸ ಮಾರಾಟಗಾರರಿಗೆ ತಿಳಿಸುವುದೇನೆಂದರೆ, ಶ್ರೀ ಬುದ್ಧ ಪೂರ್ಣಿಮಾ ಅಂಗವಾಗಿ ಮೇ 23ರಂದು ಜಾನುವಾರುಗಳ ವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಮಾಂಸ ಮಾರಾಟ ಮಾಡುವುದಾಗಲಿ, ಜಾನುವಾರುಗಳನ್ನು ವಧೆ ಮಾಡದಿರಲು ಸೂಚಿಸಲಾಗಿದೆ. ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂಥವರ ಲೈಸನ್ಸನ್ನು ರದ್ದು ಮಾಡಲಾಗುವುದು ಎಂದು ಗದಗ–ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಯೋತ್ಪಾದನಾ ವಿರೋಧಿ ದಿನ ಆಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರ ಅಧ್ಯಕ್ಷತೆಯಲ್ಲಿ ಭಯೋತ್ಪಾದನಾ ವಿರೋಧಿ ದಿನಾಚರಣೆಯ ಅಂಗವಾಗಿ ಹಿಂಸೆ ಮತ್ತು ಭಯೋತ್ಪಾದನೆ ಮೆಟ್ಟಿ, ಶಾಂತಿ–ಸೌಹಾರ್ದತೆ ಕಾಪಾಡುವ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮ ಜರುಗಿತು.

ಅಪರ ಜಿಲ್ಲಾಧಿಕಾರಿ ಸುರೇಖಾ ಅವರು ಅಹಿಂಸೆ ಹಾಗೂ ಸಹನೆಗೆ ಹೆಸರಾದ ನಮ್ಮ ರಾಷ್ಟ್ರದ ಭವ್ಯ ಪರಂಪರೆಯಲ್ಲಿ ದೃಢ ವಿಶ್ವಾಸವುಳ್ಳ ನಾವು ಎಲ್ಲ ಬಗೆಯ ಭಯೋತ್ಪಾದನೆ ಮತ್ತು ಹಿಂಸೆಯನ್ನು ನಮ್ಮ ಶಕ್ತಿ ಸಾಮರ್ಥ್ಯದಿಂದ ಎದುರಿಸಿ ಶಾಂತಿ, ಸಾಮಾಜಿಕ ಸೌಹಾರ್ದತೆ ಸಾಧಿಸಿ ವಿಚ್ಛಿದ್ರಕಾರಿ ಶಕ್ತಿಗಳೊಡನೆ ಹೋರಾಡುವ ಪಣ ತೊಡುವ ಪ್ರಮಾಣ ವಚನ ಬೋಧಿಸಿದರು.

ಈ ಸಂದರ್ಭದಲ್ಲಿ ಕಂದಾಯ ಇಲಾಖೆಯ ಶಿರಸ್ತೇದಾರರಾದ ಎಂ.ಎಸ್. ಮೇಲ್ಮನಿ, ಎಸ್.ಎಂ. ಹಿರೇಮಠ, ಎಂ.ಎಸ್. ಫರ್ನಾಂಡೀಸ್, ಮಹೇಶ ಕರಡ್ಡಿಗುಡ್ಡ, ಸಹನಾ ಹಂಜೆ, ಎಸ್.ಪಿ. ಸಾವಳಗಿಮಠ, ಸಹಾಯಕ ನಿರ್ದೇಶಕರಾದ ತಾರಾಬಾಯಿ ನಾಯಕ ಸೇರಿದಂತೆ ವಿವಿಧ ಇಲಾಖೆಯ ಸಿಬ್ಬಂದಿಗಳು ಹಾಜರಿದ್ದರು.

### ಪತ್ರಿಕಾಗೋಷ್ಠಿಯಲ್ಲಿ ರಾಜ್ಯ ಸರ್ಕಾರದ ವಿರುದ್ಧ ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ ಆರೋಪ

# ಪಠ್ಯಕ್ರಮ ಬದಲಾವಣೆ ಮಾಡಿದ್ದೇಕೆ?

■ವಿಜಯಸಾಕ್ಷಿ ಸುದ್ದಿ, ಗದಗ

ಖ್ಯಾತ ಚಿಂತಕ, ವಿದ್ವಾಂಸ ಚಕ್ರವರ್ತಿ ಸೂಲಿಬೆಲೆ ಬರೆದ 'ತಾಯಿ ಭಾರತೀಯ ಅಮರ ಪುತ್ರರು' ಎಂಬ ಪಾಠದಲ್ಲಿ ಸ್ವಾತಂತ್ರ್ಯ ಹೋರಾಟಗಾರರಾದ ರಾಜಗುರು, ಸುಖದೇವ್, ಭಗತ್ ಸಿಂಗ್‌ರ ಜೀವನ ಚರಿತ್ರೆ ಅಳವಡಿಸಲಾಗಿತ್ತು. ಆದರೆ, ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ಈ ಪಾಠವನ್ನು ಕೈಬಿಟ್ಟಿತು. ಇಂತಹ ಮಹಾನ್ ನಾಯಕರ ಪಾಠಗಳನ್ನು ಬದಲಾವಣೆ ಮಾಡಿದ್ದೇಕೆ? ಸರ್ಕಾರ ಚಕ್ರವರ್ತಿ ಸೂಲಿಬೆಲೆ ಮೇಲಿನ ದ್ವೇಷದಿಂದ, ಬಿಜೆಪಿ ಮೇಲಿನ ಸೇಡಿನಿಂದ ಪಠ್ಯಕ್ರಮ ಬದಲಾಯಿಸಿದ್ದು ಸೂಕ್ತವಲ್ಲ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ ಆಕ್ರೋಶ ವ್ಯಕ್ತಪಡಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸಿದ್ದರಾಮಯ್ಯ ಸರ್ಕಾರ ಆಡಳಿತಕ್ಕೆ ಬಂದ ನಂತರ ಶಿಕ್ಷಣ ವ್ಯವಸ್ಥೆ ಹಾಳಾಗಿದೆ. ಶಿಕ್ಷಣ ವ್ಯವಸ್ಥೆ ಹದಗೆಡಲು ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪನವರ ನಿರ್ಲಕ್ಷ್ಯ ಮನೋಭಾವನೆ ಕಾರಣ. ಸರ್ಕಾರದ ಎಡವಟ್ಟು ಮಾಡಿ ಸಾರ್ವಜನಿಕರ, ಶಿಕ್ಷಣ ತಜ್ಞರ ಟೀಕೆಗೆ ಗುರಿಯಾಗಿದೆ.

ಸರ್ಕಾರ ಅಧಿಕಾರಕ್ಕೆ ಬಂದ ಒಂದೇ ತಿಂಗಳಲ್ಲಿ



ಪಠ್ಯಕ್ರಮ ರದ್ದು ಮಾಡುತ್ತೇವೆಂದರು. ಶಿಕ್ಷಣ ಇಲಾಖೆಯಲ್ಲಿ ಪಠ್ಯಕ್ರಮದ ಕುರಿತು ರಾಜಕೀಯ ಹಸ್ತಕ್ಷೇಪ ಆಗಬಾರದು. 6ನೇ ತರಗತಿಯಿಂದ 8ನೇ ತರಗತಿಯವರೆಗಿನ ಕನ್ನಡ ಹಾಗೂ ಸಾಮಾನ್ಯ ವಿಜ್ಞಾನ ವಿಷಯದಲ್ಲಿ 9 ಪಾಠಗಳನ್ನು ರದ್ದು ಮಾಡಿ ಬದಲಾವಣೆ ಮಾಡಿದರು. ಪಠ್ಯ ಪುಸ್ತಕ ಬದಲಾವಣೆ ಮಾಡಿ ವಿದ್ಯಾರ್ಥಿಗಳಿಗೆ ತಲುಪಿಸಲಿಲ್ಲ. ಆದರೆ, ಕೇವಲ ಶಿಕ್ಷಕರಿಗೆ ಮಾತ್ರ ತಲುಪಿಸಿದರು. ಇದರಿಂದ ವಿದ್ಯಾರ್ಥಿಗಳ ಫಲಿತಾಂಶದ ಮೇಲೆ ದೊಡ್ಡ ಪ್ರಮಾಣದಲ್ಲಿ ಬದಲಾವಣೆ ಆಗಿದ್ದು ದುರಾದೃಷ್ಟಕರ ಎಂದು ವಾಗ್ದಾಳಿ ನಡೆಸಿದರು.

ಬಿಜೆಪಿ ಅವಧಿಯಲ್ಲಿ ಕಸ್ತೂರಿ ರಂಗನ್ ಸಮಿತಿ ಮಾಡಿ, ಶಿಕ್ಷಣ ತಜ್ಞರ ಜೊತೆ ಚರ್ಚಿಸಿ ವೈಜ್ಞಾನಿಕ ತಳಹದಿ ಮೇಲೆ ಸಿದ್ದಪಡಿಸಿದ ಎನ್‌ಇಪಿಯನ್ನು ಜಾರಿಗೆ ತರಲಾಗಿತ್ತು. ಆದರೆ, ಸಿದ್ದರಾಮಯ್ಯ ಸರ್ಕಾರ ಎನ್‌ಇಪಿ ರದ್ದು ಮಾಡಿತು. ಶಿಕ್ಷಣ ವಿಷಯದಲ್ಲಿ ಜಗಳ ಯಾಕೆ ಎಂದು ಪ್ರಶ್ನಿಸಿದ ಅವರು, ರಾಜ್ಯಾದ್ಯಂತ ಸಿಬಿಎಸ್‌ಸಿ, ಐಸಿಎಸ್‌ಸಿ ಶಾಲೆಗಳಲ್ಲಿ ಎನ್‌ಇಪಿ ಜಾರಿಯಾಗುತ್ತಿವೆ. ಇದರಿಂದ ನಮ್ಮ ರಾಜ್ಯದಲ್ಲಿಯೇ ಎರಡು ರೀತಿಯ ಶಿಕ್ಷಣ ವ್ಯವಸ್ಥೆ ಜಾರಿಯಿದ್ದು, ವಿದ್ಯಾರ್ಥಿಗಳಲ್ಲಿ ಸಾಕಷ್ಟು ಗೊಂದಲ ಉಂಟಾಗುತ್ತದೆ ಎಂದು ಹೇಳಿದರು.

ಸರ್ಕಾರ ಅಧಿಕಾರಕ್ಕೆ ಬಂದ ನಂತರ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಗೆ ಮೂರು ಪರೀಕ್ಷೆ ಮಾಡಿದರು. ಮೂರು ಪರೀಕ್ಷೆ ಮಾಡಿದ್ದರಿಂದ ವಿದ್ಯಾರ್ಥಿಗಳಲ್ಲಿ ಪರೀಕ್ಷೆ ಬಗ್ಗೆ ಗಂಭೀರತೆ, ಘನತೆ ಹೋಗಿದೆ. ಜುಲೈ ಕೊನೆಯ ತನಕ ಕೇವಲ ಪರೀಕ್ಷೆ ಬರೆಯುತ್ತಾ ಹೋಗಬೇಕು.

* ವೆಬ್ ಕಾಸ್ಟಿಂಗ್ ವ್ಯವಸ್ಥೆಯಿಂದ ವಿದ್ಯಾರ್ಥಿಗಳಲ್ಲಿ ಭಯದ ವಾತಾವರಣ.
* ರಾಜಗುರು, ಭಗತ್ ಸಿಂಗ್, ಸುಖದೇವರ ಪಠ್ಯಕ್ರಮ ತಗೆದು ಹಾಕಿದ್ದು ದುರಂತ.
* ಎಸ್‌ಎಸ್‌ಎಲ್‌ಸಿ, ಪಿಯುಸಿಗೆ ಮೂರು ಪರೀಕ್ಷೆ ಮಾಡಿದ್ದು ಸರಿಯಾದ ಕ್ರಮವಲ್ಲ.
* 6ರಿಂದ 8ನೇ ತರಗತಿಯ 9 ಪಾಠಗಳನ್ನು ರದ್ದು ಮಾಡಿದ್ದು ಸಮಂಜಸವಲ್ಲ.
* ರಾಜ್ಯದಲ್ಲಿ ಶೇ. 43 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಸರ್ಕಾರ ಶೇ. 73 ಫಲಿತಾಂಶ ತೋರಿಸಿದ್ದೇಕೆ?

ಇದರಿಂದ ಪಿಯುಸಿ ತರಗತಿಯ ಎರಡು ತಿಂಗಳ ಬೋಧನಾ ವ್ಯವಸ್ಥೆ ಮುಂದೆ ಹೋಗುತ್ತದೆ. ಮೂರು ಪರೀಕ್ಷೆ ಮಾಡಿ ಅಂತ ಸರ್ಕಾರಕ್ಕೆ ಸೂಚಿಸಿದವರು ಯಾರು? ಇದಕ್ಕೆ ಶಿಕ್ಷಣ ಸಚಿವ ಮಧು ಬಂಗಾರಪ್ಪ ಹಾಗೂ ಸರ್ಕಾರ ಉತ್ತರ ಕೊಡಲಿ. ಈ ವ್ಯವಸ್ಥೆ ಸ್ಥಗಿತಗೊಳಿಸಿ ಹಳೆಯ ಪದ್ಧತಿ ಜಾರಿಗೋಳಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಜಯದೇವ ಮೇಣಸಗಿ, ಪುನೀತ್ ಬೆನಕನವಾರಿ, ರವಿ ನರೆಗಲ್, ಹನಮಂತ ಹಳ್ಳೂರ, ಶಿವು ಜೋಗಿನ, ಸೋಮು ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

### ಸುದ್ದಿಗೋಷ್ಠಿಯಲ್ಲಿ ಎಬಿವಿಪಿ ರಾಜ್ಯ ಕಾರ್ಯಕಾರಿಣಿ ಸದಸ್ಯ ರವಿ ನರೆಗಲ್ ಆರೋಪ

# ರಾಜ್ಯದಲ್ಲಿ ವಿದ್ಯಾರ್ಥಿಗಳಿಗೆ ರಕ್ಷಣೆಯಿಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯಲ್ಲಿ ನೇಹಾ ಹಿರೇಮಠ, ಅಂಜಲಿ ಹತ್ಯೆ ನಡೆದಿದೆ. ಜೊತೆಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆದು ಬಂದ ನಂತರ ಮೀನಾಕ್ಷಿ ಎನ್ನುವ ವಿದ್ಯಾರ್ಥಿನಿಯ ಹತ್ಯೆ ಕೊಡಗಿನಲ್ಲಿ ನಡೆದಿದೆ. ಇಂತಹ ಘಟನೆಗಳಿಂದ ವಿದ್ಯಾರ್ಥಿನಿಯರನ್ನು ಶಾಲೆಗೆ ಕಳುಹಿಸಲು ಪಾಲಕರು ಹಿಂಜರಿಯುತ್ತಿದ್ದಾರೆ. ಧಾರವಾಡದ ವಿಶ್ವವಿದ್ಯಾಲಯದ ಆವರಣದಲ್ಲಿ ವಿದ್ಯಾರ್ಥಿನಿಯ ಬಂಗಾರದ ಸರ ಕಳ್ಳತನವಾಗಿದೆ. ಇದೆಲ್ಲವನ್ನು ಗಮನಿಸಿದರೆ ರಾಜ್ಯದಲ್ಲಿ ವಿದ್ಯಾರ್ಥಿಗಳಿಗೆ ಯಾವುದೇ ರಕ್ಷಣೆ ಇಲ್ಲ ಎಂದು ಎಬಿವಿಪಿ ರಾಜ್ಯ ಕಾರ್ಯಕಾರಿಣಿ ಸದಸ್ಯ ರವಿ ನರೆಗಲ್ ಆಕ್ರೋಶ ವ್ಯಕ್ತಪಡಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಕರೆದಿದ್ದ



ರಾಜ್ಯ ಸರ್ಕಾರ ಹೆಣ್ಣು ಮಕ್ಕಳ ರಕ್ಷಣೆಗೆ ಮುಂದಾಗುತ್ತಿಲ್ಲ. ಸಿಎಂ, ಡಿಸಿಎಂಗೆ ಆಡಳಿತ ನಡೆಸಲು ಆಗುತ್ತಿಲ್ಲ. ಸರಣಿ ಕೊಲೆಗಳು ನಡೆಯುತ್ತಿದ್ದರೂ ಅವರಿಗೆ ಅರಿವು ಇಲ್ಲ. ವಿದ್ಯಾರ್ಥಿಗಳಿಗೆ ಯಾವುದೇ ಭದ್ರತೆ ಇಲ್ಲ. ಶಾಲಾ–ಕಾಲೇಜು ಆವರಣದಲ್ಲಿ ಮಾದಕ ವಸ್ತುಗಳು ಪತ್ತೆಯಾಗುತ್ತಿವೆ. ಇದರಿಂದ ವಿದ್ಯಾರ್ಥಿಗಳ ಜೀವನ ಸಂಪೂರ್ಣ ಹಾಳಾಗುತ್ತಾ ಹೋಗುತ್ತದೆ. ಕೂಡಲೇ ಸರ್ಕಾರ ವಿದ್ಯಾರ್ಥಿಗಳಿಗೆ ರಕ್ಷಣೆ ನೀಡುವ ಕೆಲಸ ಮಾಡಬೇಕು ಎಂದು ಹನಮಂತ ಹಳ್ಳೂರ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಮ್ಮು–ಕಾಶ್ಮೀರ, ಬಿಹಾರ, ಉತ್ತರ ಪ್ರದೇಶದಲ್ಲಿ ಅನೇಕ ಅಪರಾಧ ಪ್ರಕರಣಗಳು ನಡೆಯುತ್ತಿದ್ದವು. ಆದರೆ, ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಮೇಲೆ ಇಲ್ಲಿಯೂ ಅಂತಹ ಘಟನೆಗಳು ನಡೆಯುತ್ತಿವೆ. ಸರ್ಕಾರ ಕೇವಲ ಗ್ಯಾರಂಟಿ ಯೋಜನೆಗಳಿಗಷ್ಟೇ ಒತ್ತು ನೀಡಿ, ಶಿಕ್ಷಣ ವ್ಯವಸ್ಥೆಯನ್ನು ಸಂಪೂರ್ಣವಾಗಿ ಹಾಳು ಮಾಡುತ್ತಿದೆ. ಇದಕ್ಕೆಲ್ಲ ಮೂಲ ಕಾರಣ ಶಿಕ್ಷಣ ಸಚಿವ ಮಧು ಬಂಗಾರಪ್ಪ ಆಗಿದ್ದಾರೆ. ಹಾಗಾಗಿ ಶಿಕ್ಷಣ ಸಚಿವರನ್ನು ಕೂಡಲೇ ಸಂಪುಟದಿಂದ ಕೈ ಬೀಡಬೇಕು. ಗೃಹ ಸಚಿವ ಜಿ. ಪರಮೇಶ್ವರ್ ಅವರು ಕಾನೂನು ಚೌಕಟ್ಟನ್ನು ಮೀರಿ ಮಾತನಾಡುತ್ತಾರೆ. ಇವರನ್ನೂ ಕೂಡ ಸಂಪುಟದಿಂದ ವಜಾಗೋಳಿಸಬೇಕು ಎಂದು ಸಿಎಂ ಸಿದ್ದರಾಮಯ್ಯನವರಿಗೆ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಎಬಿವಿಪಿ ರಾಜ್ಯ ಕಾರ್ಯಕಾರಿಣಿ ಸದಸ್ಯ ಶಿವು ಜೋಗಿನ, ನಗರ ಕಾರ್ಯದರ್ಶಿ ಸೋಮಶೇಖರ ಪಾಟೀಲ ಉಪಸ್ಥಿತರಿದ್ದರು.

## ಚರಂಡಿ ನೀರು ರಸ್ತೆಗೆ: ಅವಾಂತರ ಸೃಷ್ಟಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಸೋಮವಾರ ರಾತ್ರಿ ಸುರಿದ ಭಾರೀ ಮಳೆಗೆ ಚರಂಡಿಗಳಲ್ಲಿ ಸಂಗ್ರಹವಾಗಿದ್ದ ತ್ಯಾಜ್ಯ, ಕೊಳಚೆ ಪಟ್ಟಣದ ಮುಖ್ಯ ರಸ್ತೆಯ ಮೇಲೆ ಹರಿದ ಪರಿಣಾಮ, ಬೆಳಿಗ್ಗೆ ಸಂಚಾರ ಮತ್ತು ಕೆಲಕಾಲ ವ್ಯಾಪಾರಕ್ಕೆ ಅಡಚಣೆಯಾಯಿತು. ಈ ರಸ್ತೆಯ ಇಕ್ಕೆಲದ ಚರಂಡಿಗಳಲ್ಲಿ ಕಸ–ಕಡ್ಡಿಗಳು ತುಂಬಿಕೊಂಡಿದ್ದು, ನೀರು ಚರಂಡಿಯ ಬದಲಾಗಿ ರಸ್ತೆಯ ಮೇಲೆ ಹರಿದು ಹೋಗುವಂತಾಗಿದೆ.

ಮಂಗಳವಾರ ಮುಂಜಾನೆ ವ್ಯಾಪಾರಸ್ಥರು ಕೊಳಚೆಯನ್ನು ದಾಟಿ ಅಂಗಡಿಗಳಿಗೆ ಹೋಗುವಂತಾಗಿತ್ತು. ವಿಷಯ ತಿಳಿಯುತ್ತಿದ್ದಂತೆ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್ ಸ್ಥಳಕ್ಕೆ ಆಗಮಿಸಿ ಪೌರಕಾರ್ಮಿಕರಿಂದ ಕೊಳಚೆ ಸ್ವಚ್ಛಗೊಳಿಸಿದರು.

ಈ ಪ್ರಮುಖ ರಸ್ತೆಯನ್ನು ಸಿಸಿ ರಸ್ತೆಯಾಗಿ ಪರಿವರ್ತಿಸುವ ಮೊದಲು ಎರಡೂ ಬದಿಗಳಲ್ಲಿ ಚರಂಡಿಗಳನ್ನು ಸರಿಯಾಗಿ ನಿರ್ಮಿಸಲು ಒತ್ತಾಯಿಸಲಾಗಿತ್ತು. ಆದರೆ ಇದಕ್ಕೆ ಪುರಸಭೆ ಆಡಳಿತ ಮಂಡಳಿಯವರಾಗಲಿ, ಮುಖ್ಯಾಧಿಕಾರಿಗಳಾಗಲಿ ಗಮನ ಹರಿಸಿರಲಿಲ್ಲ. ಅಲ್ಲದೆ ಚರಂಡಿಗಳು ಸಹ ಅವೈಜ್ಞಾನಿಕವಾಗಿ ನಿರ್ಮಾಣವಾಗಿದ್ದು, ಮಳೆ ಬಂದಾಗೆಲ್ಲ ಚರಂಡಿಯ ನೀರು ರಸ್ತೆಯ ಮೇಲೆ ಹರಿದು ಕೊಳಚೆ ಪ್ರದೇಶ ನಿರ್ಮಾಣವಾಗುತ್ತದೆ.

ಇಟ್ಟಿಕೆರೆಗೆ ಮಳೆಯಾದಾಗ ಚರಂಡಿ ನೀರಿನೊಂದಿಗೆ ತ್ಯಾಜ್ಯ ಸೇರುವುದನ್ನು ತಡೆಯಬೇಕು. ನಗರೋತ್ಥಾನ ಯೋಜನೆಯ ಕೋಟ್ಯಾಂತರ ರೂ ಅನುದಾನದ ರಸ್ತೆ, ಚರಂಡಿ ನಿರ್ಮಾಣದ ಕಾಮಗಾರಿಗಳು ಟೆಂಡರ್ ಕರೆದು 2 ವರ್ಷವಾದರೂ ಪ್ರಾರಂಭಗೊಂಡಿಲ್ಲ. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ನಿಗಾವಹಿಸಬೇಕು. ಇಲ್ಲದಿದ್ದರೆ ಸಾರ್ವಜನಿಕರೊಡಗೂಡಿ ಪುರಸಭೆ ಮುಂದೆ ಪ್ರತಿಭಟನೆಗಿಳಿಯಲಾಗುವುದು ಎಂದು ಬೀದಿ ಬದಿ ವ್ಯಾಪಾರಸ್ಥರ ಸಂಘದ ಅಧ್ಯಕ್ಷ ಮಂಜುನಾಥ ಹೊಗೆಸೊಪ್ಪಿನ, ನಿವಾಸಿಗಳಾದ ನಾಗರಾಜ ಚಿಂಚಲಿ, ಬಸವರಾಜ ಕಲ್ಲೂರ ಮುಂತಾದವರು ಆಗ್ರಹಿಸಿದರು.

## ಕಾಂಗ್ರೆಸ್ ಸರ್ಕಾರದ ಸಾಧನೆ ಶೂನ್ಯ



■ವಿಜಯಸಾಕ್ಷಿ ಸುದ್ದಿ, ನರೇಗಲ್

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದು ಒಂದು ವರ್ಷ ಕಳೆದರೂ, ಕಾಂಗ್ರೆಸ್‌ನ ಯಾವ ಶಾಸಕರಿಂದಲೂ ಯಾವ ಕ್ಷೇತ್ರದಲ್ಲಿಯೂ ಒಂದೇ ಒಂದು ಗುದ್ದಲಿ ಪೂಜೆ ನಡೆದಿಲ್ಲ. ಕಾಂಗ್ರೆಸ್ ಸರಕಾರ ಅಭಿವೃದ್ಧಿಯಲ್ಲಿ ಶೂನ್ಯ ಸಂಪಾದನೆ ಮಾಡಿದೆ ಎಂದು ಗದಗ ಜಿಲ್ಲಾ ಜೆಡಿಎಸ್‌ನ ಅಧ್ಯಕ್ಷ ಎಂ.ವೈ. ಮುಧೋಳ ಲೇವಡಿ ಮಾಡಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಸರಕಾರ ಯಾವುದೇ ಅಭಿವೃದ್ಧಿ ಕಾರ್ಯಗಳಿಗೆ ಹಣ ಬಿಡುಗಡೆ ಮಾಡುತ್ತಿಲ್ಲ. ಚುನಾವಣಾ ನೀತಿ ಸಂಹಿತೆಯನ್ನು ಹೊರತುಪಡಿಸಿಯೂ ಎಲ್ಲಿಯೂ ಅಭಿವೃದ್ಧಿ ಕಾರ್ಯಗಳಿಗೆ ಶಂಕು ಸ್ಥಾಪನೆ ನಡೆದ ಉದಾಹರಣೆಗಳಿಲ್ಲ ಎಂದು ಹೇಳಿದ್ದಾರೆ.

ಕರ್ನಾಟಕದ ಜನತೆಗೆ ನ್ಯಾಯ ಒದಗಿಸುವಲ್ಲಿ ಕಾಂಗ್ರೆಸ್ ಸರಕಾರ ಸಂಪೂರ್ಣ ವಿಫಲವಾಗಿದೆ. ನರೇಗಲ್ಲದಿಂದ ಕೊಪ್ಪಳಕ್ಕೆ ಹೋಗಲು ಕುಕನೂರು ಹತ್ತಿರದ ಮಾರ್ಗವಾಗಿದೆ. ಆದರೆ ನರೇಗಲ್ಲದಿಂದ ಯಲಬುರ್ಗಾ ತಾಲೂಕಿನ ಸೀಮೆಯವರೆಗೆ ಹೋಗಲು ನರೇಗಲ್ಲದ ಜನ ಪಡುತ್ತಿರುವ ಕಷ್ಟವನ್ನು ಶಾಸಕರು ಅರಿಯಬೇಕು. ಆ ರಸ್ತೆಯನ್ನು ಸಂಪೂರ್ಣವಾಗಿ ದುರಸ್ತಿ ಮಾಡಲು ಸರಕಾರದಿಂದ, ಇಲಾಖೆಯಿಂದ ಸಾಧ್ಯವಾಗದಿದ್ದರೂ, ಕನಿಷ್ಠ ಡಾಂಬರೀಕರಣದ ತೇಪೆಯನ್ನಾದರೂ ಹಾಕಿ ಗುಂಡಿಗಳನ್ನು ಮುಚ್ಚಿಸಿದರೆ ಜನತೆ ಓಡಾಡಲು ಸುಲಭವಾಗುತ್ತದೆ.

ಸರಕಾರ ಅಲ್ಪ ಪ್ರಮಾಣದ ಸೌಲಭ್ಯಗಳನ್ನು ಜನತೆಗೆ ನೀಡಿ ತಾನೇನೋ ದೊಡ್ಡ ಸಾಧನೆ ಹೇಳಿಕೊಳ್ಳುತ್ತಿರುವುದು ನಾಚಿಕೆಯ ವಿಷಯ. ಒಂದು ವರ್ಷದಲ್ಲಿ ಸರಕಾರದ ಸಾಧನೆ ಶೂನ್ಯವಲ್ಲದೆ ಬೇರೇನೂ ಇಲ್ಲವೆಂದು ಮುಧೋಳ ಪತ್ರಿಕಾ ಪ್ರಕಟಣೆಯಲ್ಲಿ ತಮ್ಮ ಆಕ್ರೋಶವನ್ನು ಹೊರ ಹಾಕಿದ್ದಾರೆ.

## ಆಸ್ಪತ್ರೆಯ ಅವಸ್ಥೆಯನ್ನು ಸರಿಪಡಿಸಲು ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಸ್ಪತ್ರೆಯಲ್ಲಿನ ಅವಸ್ಥೆಯನ್ನು ಖಂಡಿಸಿ, ಲಕ್ಷೇಶ್ವರ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಪ್ರಧಾನ ಮಂತ್ರಿ ಜನ–ಔಷಧಿ ಕೇಂದ್ರವನ್ನು ತೆರೆಯುವಂತೆ ನಮ್ಮ ಕರ್ನಾಟಕ ಸೇನೆ ಗದಗ ಜಿಲ್ಲಾ ಘಟಕದ ಗದಗ ಜಿಲ್ಲಾಧ್ಯಕ್ಷ ಭೀಮಣ್ಣ ಇಂಗಳೆ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳ ಮುಖಾಂತರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ ಗುಂಡೂರಾವ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧ್ಯಕ್ಷ ಭೀಮಣ್ಣ ಇಂಗಳೆಯವರು ಗದಗ ಜಿಲ್ಲಾ ಆಸ್ಪತ್ರೆಯಲ್ಲಿ ಸ್ವಚ್ಛತೆ ಮರೀಚಿಕೆಯಾಗಿದೆ. ಸಾಕಷ್ಟು ತಾಲೂಕುಗಳಿಂದ ಬಡ ರೋಗಿಗಳು ಚಿಕಿತ್ಸೆಗೆಂದು ಬರುತ್ತಿದ್ದು, ಆಸ್ಪತ್ರೆಯಲ್ಲಿ ಸ್ವಚ್ಛತೆ ಹಾಗೂ ಔಷಧಿಗಳ ಕೊರತೆಯಿದೆ. ಗದಗ ಜಿಲ್ಲೆ ಲಕ್ಷೇಶ್ವರ ತಾಲೂಕಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಪ್ರಧಾನಮಂತ್ರಿ ಜನ ಔಷಧಿ ಕೇಂದ್ರ ಮುಚ್ಚಿದ್ದರೂ ಜಿಲ್ಲಾ ಆರೋಗ್ಯಾಧಿಕಾರಿಗಳು ಇತ್ತ ಗಮನ ಹರಿಸಿಲ್ಲ. ಈ ಎಲ್ಲ ಅವ್ಯವಸ್ಥೆಯನ್ನು ಸರಿಪಡಿಸದಿದ್ದರೆ ಸಂಘಟನೆ ವತಿಯಿಂದ ಉಗ್ರವಾದ ಹೋರಾಟ ಮಾಡಲಾಗುವುದು ಎಂದು ಮನವಿ ಮೂಲಕ ಎಚ್ಚರಿಸಿದರು.

ಈ ಸಂದರ್ಭದಲ್ಲಿ ಈರಣ್ಣ ಮ್ಯಾಗೇರಿ, ಗವಿಸಿದ್ದಯ್ಯ ಹಳ್ಳಿಕೇರಿಮಠ, ಜಗದೀಶ ಮಡಿವಾಳರ, ಶರಣಪ್ಪ ವಾಲ್ಮೀಕಿ, ವೀರೇಶ ಶಿವಶಿಂಪಗೇರಿ, ಮಾರುತಿ ಬರಗಿ, ಷಣ್ಮುಖ ಕಾತರಕಿ ಉಪಸ್ಥಿತರಿದ್ದರು.

## ಸಂಪಾದಕೀಯ

# ಸಂಪುಟ ಸರ್ಜರಿ ಸರ್ಕಸ್

ಕರ್ನಾಟಕದಲ್ಲಿ ನಡೆದ ಲೋಕಸಭೆ ಚುನಾವಣೆ ಫಲಿತಾಂಶದ ನಂತರ ಸಚಿವ ಸಂಪುಟ ಪುನರ್ ರಚನೆ ಚರ್ಚೆ ಈಗ ರಾಜ್ಯದಲ್ಲಿ ಚುರುಕು ಪಡೆದುಕೊಳ್ಳುತ್ತಿದೆ. ಲೋಕಸಭೆ ಚುನಾವಣೆಯ ಫಲಿತಾಂಶಕ್ಕೆ ದಿನಗಣನೆ ಆರಂಭವಾಗಿರುವ ಬೆನ್ನಲ್ಲೇ ಸಂಪುಟ ಸರ್ಜರಿಯೂ ಅಷ್ಟೇ ಜೋರಾಗಿ ಕೇಳಿ ಬರುತ್ತಿದೆ.


ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಲೀಡ್ ಕೊಡಿಸದ ನಾಯಕರಿಗೆ ಸಂಪುಟದಿಂದ ಕೈಬಿಡುವ ಮುನ್ಸೂಚನೆ ಕಾಂಗ್ರೆಸ್ ವಲಯದಿಂದಲೇ ಸಿಕ್ಕಿದೆ. ರಾಜ್ಯದಲ್ಲಿ ಕನಿಷ್ಠ 20 ಸೀಟ್ ಗೆಲ್ಲಿಸಿಕೊಡಬೇಕಾದ ಹೊಣೆಗಾರಿಕೆಯನ್ನು ಸಚಿವರಿಗೆ ನೀಡಲಾಗಿತ್ತು. ಆ ಟಾಸ್ಕ್ ನಲ್ಲಿ ವಿಫಲರಾಗುವ ಎಲ್ಲ ಸಚಿವರಿಗೂ ಈ ಬಾರಿ ಸಂಕಷ್ಟ ಎದುರಾಗುವುದಂತೂ ನಿಜ.

ಇಂಥದ್ದೊಂದು ಕ್ರಮ ಕಾಂಗ್ರೆಸ್ ನಲ್ಲಿ ಅಗತ್ಯವಾಗಿತ್ತು. ವಿಧಾನಸಭೆ ಚುನಾವಣೆಯಲ್ಲಿ ಗೆಲ್ಲುವ ಸಾಮರ್ಥ್ಯ ಇರುವ ಶಾಸಕರು ಲೋಕಸಭೆ ಚುನಾವಣೆ ಬಂದಾಗ ಒಂದು ರೀತಿಯ ಅಸಡ್ಡೆ ತೋರಿಸುವುದು ಸರ್ವೆ ಸಾಮಾನ್ಯವಾಗಿತ್ತು. ಅದರಲ್ಲೂ ಕಾಂಗ್ರೆಸ್ ಶಾಸಕರು ತಮ್ಮ ಪಕ್ಷದ ಲೋಕಸಭೆ ಅಭ್ಯರ್ಥಿ ಪರ ಪ್ರಾಮಾಣಿಕವಾಗಿ ಕೆಲಸ ಮಾಡಿದ ಬೆರಳೆಣಿಕೆಯ ಉದಾಹರಣೆಗಳನ್ನಷ್ಟೆ ಕಾಣಬಹುದು.

ಈ ಬಾರಿ ಶಾಸಕರು, ಸಚಿವರ ಕುಟುಂಬದ ಸದಸ್ಯರೆ ಕಣದಲ್ಲಿ ಇದ್ದ ಕಾರಣ ಈ ಬಾರಿ ಕೆಲವರು ಪ್ರಾಮಾಣಿಕವಾಗಿ ಪಕ್ಷದ ಪರವಾಗಿ ಕೆಲಸ ಮಾಡಿದ್ದಾರೆ. ಪಕ್ಷದ ಪರ ಎನ್ನುವುದಕ್ಕಿಂತ ತಮ್ಮವರ ಪರವಾಗಿ ಇಷ್ಟೊಂದು ಸರ್ಕಸ್ ಮಾಡಿರುವುದು ಎಲ್ಲರಿಗೂ ಗೊತ್ತಿರುವ ವಿಚಾರವೇ.

ಕಾಂಗ್ರೆಸ್ ಮುಖಂಡರಲ್ಲಿ ಬೇರೂರಿರುವ ಈ ಅಸಡ್ಡೆ ಸಂಸ್ಕೃತಿ ಮತ್ತು ಹೊಂದಾಣಿಕೆ ರಾಜಕಾರಣದ ಕೊಂಡಿಯನ್ನು ಕಳಚಬೇಕಾದರೆ ಈ ಕ್ರಮ ಅಗತ್ಯ ಮತ್ತು ಅನಿವಾರ್ಯ. ಕಾಂಗ್ರೆಸ್ ಯಾವುದೇ ಪರಿಸ್ಥಿತಿಯಲ್ಲಿ ತನ್ನ ಈ ನಿರ್ಧಾರವನ್ನು ಜಾರಿ ಮಾಡಿದರೆ ಮಾತ್ರ ಭವಿಷ್ಯದಲ್ಲಿ ಕಾಂಗ್ರೆಸ್ ಮತ್ತೆ ಪ್ರವರ್ಧಮಾನಕ್ಕೆ ಬರಲಿದೆ. ಇಲ್ಲವಾದರೆ ಕಾಂಗ್ರೆಸ್ ಇತಿಹಾಸ್ ಪುಟಗಳನ್ನು ಸೇರುವುದು ನಿಶ್ಚಿತ.

## ಮುಸ್ಲಿಮರ ವಿರುದ್ಧದ ಜಾಹಿರಾತುಗಳನ್ನು ಅನುಮೋದಿಸಿದ್ದ ಮೆಟಾ




■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಭಾರತದಲ್ಲಿ ಲೋಕಸಭಾ ಚುನಾವಣೆ ನಡೆಯುತ್ತಿದೆ, ಈ ಮಧ್ಯೆ ತಪ್ಪು ಮಾಹಿತಿಯನ್ನು ಹರಡುವ ಸುದ್ದಿಗಳು, ವೀಡಿಯೊಗಳು ದೇಶದ ಸಾಮರಸ್ಯಕ್ಕೆ ಪ್ರಮುಖ ಬೆದರಿಕೆಯಾಗಿ ಹೊರಹೊಮ್ಮಿವೆ. 2024ರ ಲೋಕಸಭಾ ಚುನಾವಣೆಯ ಸಮಯದಲ್ಲಿ ತಪ್ಪು ಮಾಹಿತಿಯನ್ನು ಹರಡುವ ಹಲವಾರು ರಾಜಕೀಯ ಜಾಹೀರಾತುಗಳನ್ನು ಮೆಟಾ ಅನುಮೋದಿಸಿದೆ ಎನ್ನುವುದನ್ನು ವರದಿಯೊಂದು ಬಹಿರಂಗಪಡಿಸಿದೆ.

ಫೇಸ್‌ಬುಕ್ ಮತ್ತು ಇನ್‌ಸ್ಟಾಗ್ರಾಂ ಮಾಲೀಕತ್ವ ಹೊಂದಿರುವ ಮೆಟಾ ಭಾರತದ ಚುನಾವಣೆಯ ಸಮಯದಲ್ಲಿ ಂಖ(ಆರ್ಟಿಫಿಶಿಯಲ್ ಇಂಟೆಲಿಜೆನ್ಸ್)(ಕೃತಕ ಬುದ್ಧಿಮತ್ತೆ)ಯ ರಾಜಕೀಯ ಜಾಹೀರಾತುಗಳನ್ನು ಅನುಮೋದಿಸಿದೆ. ಆ ಜಾಹೀರಾತುಗಳು ತಪ್ಪು ಮಾಹಿತಿಯನ್ನು ಹರಡಿದೆ ಮತ್ತು ಧಾರ್ಮಿಕ ಹಿಂಸಾಚಾರವನ್ನು ಪ್ರಚೋದಿಸಿದೆ ಎಂದು ವರದಿಯೊಂದು ಉಲ್ಲೇಖಿಸಿದೆ.

"ಈ ಕ್ರಿಮಿಕೀಟಗಳನ್ನು ಸುಡೋಣ", "ಹಿಂದೂ ರಕ್ತ ಚೆಲ್ಲುತ್ತಿದೆ, ಈ ದಾಳಿಕೋರರನ್ನು ಸುಡಬೇಕು" ಎಂಬಂತಹ ಭಾರತದಲ್ಲಿನ ಮುಸ್ಲಿಮರ ವಿರುದ್ಧ ನಿಂದನೆಗಳನ್ನು ಒಳಗೊಂಡಿರುವ ಜಾಹೀರಾತುಗಳನ್ನು ಫೇಸ್‌ಬುಕ್ ಅನುಮೋದಿಸಿದೆ ಮತ್ತು ಕೆಲ ರಾಜಕೀಯ ನಾಯಕರ ಬಗ್ಗೆ ತಪ್ಪು ಮಾಹಿತಿ ಇರುವ ಜಾಹೀರಾತುಗಳನ್ನು ಕೂಡ ಫೇಸ್‌ಬುಕ್ ಅನುಮೋದಿಸಿದೆ.

## ರಾಜ್ಯದ 5,8,9ನೇ ತರಗತಿಯ ಎಲ್ಲಾ ವಿದ್ಯಾರ್ಥಿಗಳು ಪಾಸ್: ಶಿಕ್ಷಣ ಇಲಾಖೆ ಆದೇಶ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ರಾಜ್ಯದ ಎಲ್ಲಾ ಶಾಲೆಗಳ 5, 8 ಹಾಗೂ 9ನೇ ತರಗತಿಯ ವಿದ್ಯಾರ್ಥಿಗಳನ್ನು ಮುಂದಿನ ಶೈಕ್ಷಣಿಕ ತರಗತಿಯಲ್ಲಿ ಮುಂದುವರಿಸಲು ಅವಕಾಶ ಕಲ್ಪಿಸಲಾಗಿದೆ.

ಈ ಕುರಿತು ಶಾಲಾ ಶಿಕ್ಷಣ ಇಲಾಖೆಯ ಆಯುಕ್ತೆ ಬಿ.ಬಿ ಕಾವೇರಿ ಆದೇಶ ಹೊರಡಿಸಿದ್ದು, "ಮಕ್ಕಳ ಶೈಕ್ಷಣಿಕ ಭವಿಷ್ಯದ ಹಿತದೃಷ್ಟಿಯಿಂದ ಶಾಲೆಗಳಲ್ಲಿ ನಡೆದಿರುವ ಪರೀಕ್ಷೆಗಳ ಮೌಲ್ಯಾಂಕನ ಆಧರಿಸಿ ಮುಂದಿನ ತರಗತಿಗೆ ದಾಖಲಾತಿ ಮಾಡಿಕೊಳ್ಳಲು ಅನುಕೂಲ ಮಾಡಿಕೊಡುವಂತೆ" ಸೂಚಿಸಿದ್ದಾರೆ.

2023–24ನೇ ಸಾಲಿನ ಫಲಿತಾಂಶವನ್ನು ರಾಜ್ಯದ ಎಲ್ಲಾ ಶಾಲೆಗಳಲ್ಲಿ ಏಪ್ರಿಲ್ 8ರಂದು ಪ್ರಕಟಿಸುವಂತೆ ಈ ಹಿಂದೆ ಆದೇಶಿಸಲಾಗಿತ್ತು. ಆದರೆ, ಫಲಿತಾಂಶ ಪ್ರಕಟಿಸದಂತೆ ಸುಪ್ರೀಂ ಕೋರ್ಟ್ ತಡೆಯಾಜ್ಞೆ ನೀಡಿದ್ದರಿಂದ ಇನ್ನೂ ಫಲಿತಾಂಶ ಪ್ರಕಟಗೊಂಡಿಲ್ಲ.

ಪ್ರಸ್ತುತ 2023–24ನೇ ಸಾಲಿನ ಶೈಕ್ಷಣಿಕ ವರ್ಷ ಅಂತ್ಯಗೊಳ್ಳುತ್ತಿದ್ದು, ಇದೇ ಮೇ 29 ರಿಂದ 2024– 25ನೇ ಸಾಲಿನ ಶೈಕ್ಷಣಿಕ ವರ್ಷ ಪ್ರಾರಂಭವಾಗಲಿದೆ. 2023–24ನೇ ಸಾಲಿನಲ್ಲಿ ವ್ಯಾಸಂಗ ಮಾಡಿದ 5, 8 ಮತ್ತು 9ನೇ ತರಗತಿಯ ವಿದ್ಯಾರ್ಥಿಗಳ ಫಲಿತಾಂಶ ಪ್ರಕಟಿಸದೇ ಇದ್ದಿದ್ದರಿಂದ ವಿದ್ಯಾರ್ಥಿಗಳ ಮುಂದಿನ ಶೈಕ್ಷಣಿಕ ತರಗತಿಗೆ ಪ್ರವೇಶ, ದಾಖಲಾತಿ, ಪ್ರವೇಶ ಶುಲ್ಕ ಪಾವತಿ ಹಾಗೂ ಬೇರೆ ಸ್ಥಳಗಳಿಗೆ ವರ್ಗಾವಣೆಗೆ ಪ್ರಮಾಣ ಪತ್ರ, ಪ್ರಗತಿ ಪತ್ರ, ವ್ಯಾಸಂಗ ಪ್ರಮಾಣ ಪತ್ರ ವಿತರಿಸಲು ಶಾಲೆಗಳಿಗೆ ಸಾಧ್ಯವಾಗಿರಲಿಲ್ಲ.

ಹಾಗಾಗಿ, ಮಕ್ಕಳ ಶೈಕ್ಷಣಿಕ ಭವಿಷ್ಯದ ಹಿತದೃಷ್ಟಿಯಿಂದ ಶಾಲೆಗಳಲ್ಲಿ ನಡೆದಿರುವ ಪರೀಕ್ಷೆಗಳ ಮೌಲ್ಯಾಂಕನ ಆಧರಿಸಿ ಮುಂದಿನ ತರಗತಿಯಲ್ಲಿ ಮುಂದುವರಿಸಲು ಅವಕಾಶ ಕಲ್ಪಿಸುವಂತೆ ಆದೇಶಿಸಲಾಗಿದೆ.

ನ್ಯಾಯಾಲಯದ ಮಧ್ಯಂತರ ತೀರ್ಪಿನಂತೆ, 2023–24ನೇ ಸಾಲಿನ 5, 8 ಮತ್ತು 9ನೇ ತರಗತಿ SA-2 ಮೌಲ್ಯಾಂಕನವನ್ನು ತಡೆಹಿಡಿದಿರುವ ಹಿನ್ನೆಲೆ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಈಗಾಗಲೇ ಶಾಲೆಗಳಲ್ಲಿ ನಡೆದಿರುವ ಈಂ– 1, FA-2, FA-3, FA-4 2 SA-1 ಮೌಲ್ಯಾಂಕನ ಆಧಾರದ ಮೇಲೆ ತರಗತಿಗೆ ಮುಂದುವರೆಸಲು ಅವಕಾಶ ಕಲ್ಪಿಸುವಂತೆ ಸೂಚಿಸಲಾಗಿದೆ.

# ತಂಪಾದ ಇಳೆ: ಕೃಷಿ ಚಟುವಟಿಕೆಗಳಿಗೆ ಕಳೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಕಳೆದ ವರ್ಷದ ಮುಂಗಾರು ಮತ್ತು ಹಿಂಗಾರು ಮಳೆಯಾಗದೇ ಬರಗಾಲದ ಬೇಗುದಿಯಲ್ಲಿ ಬಳಲುತ್ತಿದ್ದ ಜನತೆಗೆ ಸೋಮವಾರ ತಡರಾತ್ರಿ 2 ಗಂಟೆಗಳ ಕಾಲ ಸುರಿದ ಉತ್ತಮ ಮಳೆ ಮಂದಹಾಸ ಮೂಡಿಸಿದೆ.

ಬೇಸಿಗೆಯುದ್ದಕ್ಕೂ ಜನಜಾನುವಾರುಗಳು ಅನುಭವಿಸುತ್ತಿದ್ದ ನೀರಿನ ಬವಣೆ, ವಿಪರೀತ ಬಿಸಿಲಿನ ತಾಪಕ್ಕೆ ಕಂಗೆಟ್ಟಿದ್ದ ಜನತೆ, ಪಶು–ಪಕ್ಷಿ, ಪ್ರಾಣಿಗಳೂ ಸಹ ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ. ರಾತ್ರಿ ಗುಡುಗು–ಸಿಡಿಲು ಗಾಳಿಯೊಂದಿಗೆ ಅಬ್ಬರಿಸಿದ ಮಳೆಯಿಂದ ಕೆರೆ, ಹಳ್ಳ–ಕೊಳ್ಳ ಮತ್ತು ಜಮೀನಿನ ತಗ್ಗು ಪ್ರದೇಶಗಳಲ್ಲಿ ನೀರು ನಿಂತಿವೆ. ಹಲವು ಕಡೆ ಬದುಗಳು ಕಿತ್ತು ಜಮೀನು ಕೊಚ್ಚಿದೆ. ಪಟ್ಟಣದಲ್ಲಿ ಚರಂಡಿಗಳು ತುಂಬಿ ರಸ್ತೆಯ ಮೇಲೆ ಹರಿದಿವೆ. ಕೆಲವಡೆ ಮರ, ಮನೆ ಬಿದ್ದಿರುವ ಘಟನೆಳಾದರೂ ಯಾವುದೇ ಹಾನಿ ಸಂಭವಿಸಿದ ವರದಿಯಾಗಿಲ್ಲ. ಹವಾಮಾನ ಇಲಾಖೆಯ ಮಾಹಿತಿ ಪ್ರಕಾರ ಸೋಮವಾರ ರಾತ್ರಿ ಲಕ್ಷ್ಮೇಶ್ವರ ತಾಲೂಕಿನಲ್ಲಿ 67.0 ಮಿ.ಮೀ ಮಳೆಯಾಗಿದೆ.

ತಾಲೂಕಿನ ಯಳವತ್ತಿ, ಯತ್ನಳ್ಳಿ, ಮಾಗಡಿ, ಗೊಜನೂರ, ಅಕ್ಕಿಗುಂದ, ಆದ್ರಳ್ಳಿ, ಬಡ್ನಿ, ಬಟ್ಟೂರ, ಸೂರಣಗಿ, ಹುಲ್ಲೂರ, ಬಾಲೆಹೊಸೂರ, ಶಿಗ್ಲಿ, ದೊಡ್ಡೂರ, ರಾಮಗೇರಿ, ಬಸಾಪುರ, ಅಡರಕಟ್ಟಿ ಸೇರಿ ಎಲ್ಲೆಡೆ ಉತ್ತಮ ಮಳೆಯಾಗಿದೆ. ಲಕ್ಷ್ಮೇಶ್ವರದಲ್ಲಿ ಒಳಚರಂಡಿ ಕಾಮಗಾರಿ, ನಗರೋತ್ಥಾನ ಕಾಮಗಾರಿಯ ಬಹುತೇಕ ರಸ್ತೆಗಳು ಹಾಳಾಗಿದ್ದು, ಮಳೆಯಿಂದ ರಸ್ತೆಗಳ ನೈಜಸ್ಥಿತಿ ಅನಾವರಣಗೊಂಡಿದೆ.

ಮುಂಗಾರು ಪೂರ್ವ ಮಳೆಯೇ ಆಗದ್ದರಿಂದ ಬಿತ್ತನೆಗೆ ಭೂಮಿ ಸಿದ್ಧಪಡಿಸಲಾಗದೇ ರೈತರು ಚಡಪಡಿಸುತ್ತಿದ್ದ ಸಂದರ್ಭದಲ್ಲಿ ಸೋಮವಾರ ರಾತ್ರಿ ಸುರಿದ ಮಳೆ ರೈತರ ಮೊಗದಲ್ಲಿ ಮಂದಹಾಸ ಮೂಡಿಸಿದ್ದು, ಮುಂಗಾರಿನ ಕೃಷಿ ಚಟುವಟಿಕೆಗಳಿಗೆ ಅನಕೂಲಕರ ವಾತಾವರಣ ನಿರ್ಮಾಣವಾಗಿದೆ. ಬರಿದಾಗಿರುವ ಕೆರೆ, ಕೃಷಿಹೊಂಡ, ಹಳ್ಳ ಮತ್ತು ಬದು–ಬಾಂದಾರಗಳಲ್ಲಿ ನೀರು ಸಂಗ್ರಹವಾಗುವಂತೆ ಇನ್ನಷ್ಟು ಮಳೆಯಾದರೆ, ಅಂತರ್ಜಲ ಮಟ್ಟ ಹೆಚ್ಚಳ, ಉತ್ತಮ ಬೆಳೆಯ ನಿರೀಕ್ಷೆ ಮತ್ತು ವರ್ಷಪೂರ್ತಿ ನೀರಿಗಾಗಿ ಪರಿತಪಿಸದೇ ನೆಮ್ಮದಿಯ ನಿಟ್ಟುಸಿರುವ ಬಿಡಬಹುದು ಎಂಬುದು ರೈತ ಸಮುದಾಯದ ಅಭಿಪ್ರಾಯ.

# ಧಾರ್ಮಿಕ ಆಚರಣೆಗಳಲ್ಲಿ ರಾಜಕೀಯ ಹಸ್ತಕ್ಷೇಪ ಬೇಡ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ



ಧಾರ್ಮಿಕ ಆಚರಣೆಗಳಿಂದ ಉತ್ತಮ ಸಂಸ್ಕಾರ, ಧರ್ಮ ಸಹಿಷ್ಣುತೆ, ಶಾಂತಿ ಮತ್ತು ಮೋಕ್ಷ ಪ್ರಾಪ್ತಿಯಾಗುತ್ತದೆ ಎಂದು ಆವರಗೊಳ್ಳ ಪುರವರ್ಗ ಮಠದ ಓಂಕಾರ ಶಿವಾಚಾರ್ಯ ಸ್ವಾಮೀಜಿ ನುಡಿದರು.

ತಾಲೂಕಿನ ಕಂಚೀಕೆರೆ ಗ್ರಾಮದಲ್ಲಿ ಸೋಮವಾರ ವೀರಭದ್ರೇಶ್ವರ ದೇವಸ್ಥಾನ ಅನಾವರಣ, ಶಿಲಾಮೂರ್ತಿ ಸ್ಥಾಪನೆ, ಪ್ರಾಣ ಪ್ರತಿಷ್ಠಾಪನೆ, ಕಳಸಾರೋಹಣ ಹಾಗೂ ಗುಗ್ಗಳ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಶ್ರೀಗಳು ಮಾತನಾಡಿದರು.

ಧಾರ್ಮಿಕ ಆಚರಣೆಗಳಲ್ಲಿ ರಾಜಕೀಯದ ಹಸ್ತಕ್ಷೇಪ ಒಳಿತಲ್ಲ. ಗ್ರಾಮಗಳಲ್ಲಿ ಸರ್ವಧರ್ಮೀಯರು ಒಗ್ಗೂಡಿ ಉತ್ಸವಗಳಲ್ಲಿ ಪಾಲ್ಗೊಂಡರೆ ಧಾರ್ಮಿಕ ಕಾರ್ಯಕ್ರಮಗಳ ಮೆರುಗು ಹೆಚ್ಚುತ್ತದೆ. ಮಾನವನ ಆಸೆಗೆ ಅಂತ್ಯವಿಲ್ಲ. ಇತ್ತೀಚಿನ ದಿನಮಾನಗಳಲ್ಲಿ ಪಾವು ಭೂಮಿಯನ್ನು ಬಿಡದ ಜನಗಳ ಮಧ್ಯೆ ದೇವಸ್ಥಾನಕ್ಕೆಂದು ಕೆರೆಯ ಭೂಮಿಯನ್ನು ಮೀಸಲಿಟ್ಟು, ಪವಿತ್ರ ಕಾರ್ಯದಲ್ಲಿ ತೊಡಗಿರುವುದಕ್ಕೆ ಗ್ರಾಮದ ಸರ್ವಧರ್ಮೀಯರ ಬದ್ಧತೆಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ದೇವಸ್ಥಾನ ಸಮಿತಿ ಮುಖಂಡ ಬಿದ್ರಿ ಕೊಟ್ರೇಶ್ ಮಾತನಾಡಿ, ದೇವಸ್ಥಾನ ನಿರ್ಮಾಣದಲ್ಲಿ ಗ್ರಾಮದ ಎಲ್ಲಾ ವರ್ಗದವರ ಶ್ರಮವಿದೆ. ವಿಶೇಷವಾಗಿ ಗ್ರಾಮದಲ್ಲಿ ಎಲ್ಲಾ ದೇವಸ್ಥಾನಗಳ ಮೂರ್ತಿಗಳನ್ನು ವೀರಭದ್ರೇಶ್ವರ ದೇವಸ್ಥಾನಕ್ಕೆ ತಂದು ಪೂಜೆ ಸಲ್ಲಿಸಿದ್ದು ನಮ್ಮ ಗ್ರಾಮದ ಪುಣ್ಯವೆಂದರು.

ಎಂ. ತಿಪ್ಪೇಸ್ವಾಮಿ, ಸಿದ್ದಲಿಂಗಯ್ಯ, ಕೆಂಚನಗೌಡ, ಶಾನುಭೋಗರ ಕೆಂಚಪ್ಪ, ಕೆ.ಎಸ್. ಜಾತಪ್ಪ, ಕಲ್ಲಳ್ಳಿ ಸಿದ್ದವೀರಪ್ಪ, ಮೋತಿ ಸಿದ್ದಪ್ಪ, ಬಸಣ್ಣ, ಕೊಟ್ರೇಶ್, ಬಾರಿಕರ ಮಂಜಪ್ಪ, ಸಂಗಜ್ಜ, ಸುನೀಲ, ಅರುಣ್ ಕುಮಾರ್, ಲಿಂಗರಾಜ್, ವೀರಣ್ಣ, ತೇಜಶ್ವರ ತಿಮ್ಮಾಳ, ದೇವೇಂದ್ರ, ಹನುಮಂತ, ಕೋಲ್ಕರ್ ಬಸವರಾಜ, ಗೋಣೆಪ್ಪ,ಅಂಜಿನಿ, ನಾಗರಾಜ, ಹಾಗೂ ಇತರರು ಭಾಗವಹಿಸಿದ್ದರು.

## ಪ್ರಜ್ವಲ್ ಪಾಸ್‌ಪೋರ್ಟ್ ರದ್ದುಗೊಳಿಸುವಂತೆ ಕೇಂದ್ರ ಸರಕಾರಕ್ಕೆ ಪತ್ರ ಬರೆದ ಎಸ್‌ಐಟಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಹಾಸನ ಸಂಸದ ಪ್ರಜ್ವಲ್ ರೇವಣ್ಣ ಲೈಂಗಿಕ ದೌರ್ಜನ್ಯ ಪ್ರಕರಣಗಳ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡ(ಎಸ್‌ಐಟಿ) ಇದೀಗ ಅವರ ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದುಗೊಳಿಸುವಂತೆ ವಿದೇಶಾಂಗ ಸಚಿವಾಲಯಕ್ಕೆ ಪತ್ರ ಬರೆದಿದೆ.

ಲೈಂಗಿಕ ದೌರ್ಜನ್ಯ ಪ್ರಕರಣ ಬಯಲಾಗುತ್ತಿದ್ದಂತೆ ಪ್ರಜ್ವಲ್ ರೇವಣ್ಣ ರಾಜತಾಂತ್ರಿಕ ಪಾಸ್‌ಪೋರ್ಟ್ ಬಳಸಿಕೊಂಡು ವಿದೇಶಕ್ಕೆ ಪರಾರಿಯಾಗಿದ್ದು, ಈ ಪಾಸ್‌ಪೋರ್ಟ್ ರದ್ದುಪಡಿಸುವಂತೆ ಕೋರಿ ರಾಜ್ಯ ಪೊಲೀಸ್ ಮಹಾನಿರ್ದೇಶಕರ ಮೂಲಕ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ಎಂದು ತಿಳಿದು ಬಂದಿದೆ.

ರ್ನಾಟಕದಲ್ಲಿ ಲೋಕಸಭೆಯ ಚುನಾವಣೆಯ ಹೊಸ್ತಿಲಲ್ಲಿ ಸಂಸದ ಪ್ರಜ್ವಲ್ ರೇವಣ್ಣ ಅವರ ಅಶ್ಲೀಲ ವಿಡಿಯೋಗಳು ಹರಿದಾಡಿದ್ದವು. ಆ ಬಳಿಕ ಪ್ರಜ್ವಲ್ ರೇವಣ್ಣ ವಿದೇಶಕ್ಕೆ ಪರಾರಿಯಾಗಿದ್ದರು. ಪ್ರಜ್ವಲ್ ರೇವಣ್ಣ ವಿರುದ್ಧ ಹೊಳೆನರಸೀಪುರ ಹಾಗೂ ಸಿಐಡಿ ಠಾಣೆಗಳಲ್ಲಿ ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ. ಈ ಕುರಿತು ವಿಶೇಷ ತನಿಖಾ ತಂಡ(ಎಸ್‌ಐಟಿ) ತನಿಖೆ ನಡೆಸುತ್ತಿದೆ.

ಪ್ರಜ್ವಲ್ ವಿರುದ್ಧ ಈಗಾಗಲೇ ಲುಕ್‌ಔಟ್, ಬ್ಲೂ ಕಾರ್ನರ್ ನೋಟಿಸ್ ಜಾರಿಯಾಗಿದ್ದರೂ ಅವರು ವಿಚಾರಣೆಗೆ ಹಾಜರಾಗಿಲ್ಲ.

ಪ್ರಜ್ವಲ್ ಬಂಧನಕ್ಕೆ ನ್ಯಾಯಾಲಯದಿಂದ ಬಂಧನದ ವಾರಂಟ್ ಕೂಡ ಜಾರಿ ಆಗಿದೆ. ಪ್ರಜ್ವಲ್ ಎಲ್ಲಿದ್ದಾರೆ ಎಂಬ ಸುಳಿವು ಇದುವರೆಗೂ ಸಿಕ್ಕಿಲ್ಲ ಎಂದು ಎಸ್‌ಐಟಿ ಮೂಲಗಳು ತಿಳಿಸಿದೆ.


**ರೇವಣ್ಣಗೆ ಷರತ್ತು ಬದ್ಧ ಜಾಮೀನು:** ಮನೆ ಕೆಲಸದಾಕೆ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಪ್ರಕರಣಕ್ಕೆ ಸಂಬಂಧಿಸಿ ಮಾಜಿ ಸಚಿವ ಹೆಚ್.ಡಿ ರೇವಣ್ಣಗೆ ನಿನ್ನೆ ಷರತ್ತುಬದ್ಧ ಜಾಮೀನು ನೀಡಲಾಗಿದೆ.

"ಶಾಸಕರು–ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆ"ಯ ವಿಶೇಷ ನ್ಯಾಯಾಲಯದ ನ್ಯಾಯಾಧೀಶೆ ಜೆ.ಪ್ರೀತ್ ಅವರ ಪೀಠವು ಈ ಕುರಿತು ಅರ್ಜಿಯನ್ನು ವಿಚಾರಣೆ ನಡೆಸಿ ತೀರ್ಪನ್ನು ಕಾಯ್ದಿರಿಸಿತ್ತು. ಹಾಸನದ ಹೊಳೆನರಸೀಪುರದಲ್ಲಿ ದಾಖಲಾಗಿದ್ದ ಲೈಂಗಿಕ ಕಿರುಕುಳ ಪ್ರಕರಣಕ್ಕೆ ಸಂಬಂಧಿಸಿದಂತೆ 5 ಲಕ್ಷ ರೂ. ಬಾಂಡ್, ತನಿಖೆಗೆ ಸಹಕರಿಸಬೇಕೆಂಬ ಷರತ್ತು ವಿಧಿಸಿ ನ್ಯಾಯಾಲಯ ಜಾಮೀನು ಮಂಜೂರು ಮಾಡಿದೆ.

ಮನೆ ಕೆಲಸ ಮಾಡುತ್ತಿದ್ದ ಮಹಿಳೆಯನ್ನು ಕಿಡ್ನಾಪ್ ಮಾಡಿದ್ದ ಕೇಸ್‌ನಲ್ಲಿ ಕಳೆದ ವಾರವಷ್ಟೇ ಮಧ್ಯಂತರ ಜಾಮೀನಿನಲ್ಲಿ ರೇವಣ್ಣ ಜೈಲಿನಿಂದ ಬಿಡುಗಡೆಯಾಗಿದ್ದರು.

## ಅಬಕಾರಿ ನೀತಿ ಪ್ರಕರಣ: ಮನೀಶ್ ಸಿಸೋಡಿಯಾ ಕಸ್ಟಡಿ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ದೆಹಲಿ ಮದ್ಯದ ಅಬಕಾರಿ ನೀತಿ ಪ್ರಕರಣದಲ್ಲಿ ಮಾಜಿ ಉಪ ಮುಖ್ಯಮಂತ್ರಿ ಮನೀಶ್ ಸಿಸೋಡಿಯಾ ಅವರ ನ್ಯಾಯಾಂಗ ಬಂಧನವನ್ನು ಮೇ 31 ರವರೆಗೆ ದೆಹಲಿಯ ರೂಸ್ ಅವೆನ್ಯೂ ಕೋರ್ಟ್ ಮಂಗಳವಾರ ವಿಸ್ತರಿಸಿದೆ. ಫೆಬ್ರವರಿ 26, 2023 ರಿಂದ ಸಿಬಿಐ ಬಂಧಿಸಿದ ನಂತರ ಸಿಸೋಡಿಯಾ ಜೈಲಿನಲ್ಲಿದ್ದು, ಬಳಿಕ ಇಡಿ ಅವರನ್ನು ಬಂಧಿಸಿತ್ತು.

ಅಬಕಾರಿ ನೀತಿಯನ್ನು ಮಾರ್ಪಡಿಸುವಾಗ ಅಕ್ರಮಗಳು ನಡೆದಿವೆ ಎಂದು ತನಿಖಾ ಸಂಸ್ಥೆಗಳು ಆರೋಪಿಸಿವೆ. ಪರವಾನಗಿದಾರರಿಗೆ ಅನಪೇಕ್ಷಿತ ಅನುಕೂಲಗಳನ್ನು ವಿಸ್ತರಿಸಲಾಗಿದೆ, ಪರವಾನಗಿ ಶುಲ್ಕವನ್ನು ಮನ್ನಾ ಮಾಡಲಾಗಿದೆ ಅಥವಾ ಕಡಿಮೆ ಮಾಡಲಾಗಿದೆ. ಸಕ್ಷಮ ಪ್ರಾಧಿಕಾರದ ಅನುಮೋದನೆಯಿಲ್ಲದೆ ಎಲ್ –1 ಪರವಾನಗಿಯನ್ನು ವಿಸ್ತರಿಸಲಾಗಿದೆ ಎಂದು ಸಿಬಿಐ–ಇಡಿ ವಿಸ್ತರಿಸಿದೆ.

ಜಾರಿ ನಿರ್ದೇಶನಾಲಯದ ಪ್ರಕಾರ, ಫಲಾನುಭವಿಗಳು "ಅಕ್ರಮ" ಲಾಭವನ್ನು ಆರೋಪಿ ಅಧಿಕಾರಿಗಳಿಗೆ ಕೊಟ್ಟಿದ್ದಾರೆ. ಅವರ ಖಾತೆಯ ಪುಸ್ತಕಗಳಲ್ಲಿ ತಪ್ಪು ನಮೂದುಗಳನ್ನು ಮಾಡಿದ್ದಾರೆ ಎಂದು ಜಾರಿ ನಿರ್ದೇಶನಾಲಯ ತಿಳಿಸಿದೆ.

ಇತ್ತೀಚೆಗೆ, ಜಾರಿ ನಿರ್ದೇಶನಾಲಯವು ತನಿಖೆ ನಡೆಸುತ್ತಿರುವ ಎರಡೂ ಪ್ರಕರಣಗಳಲ್ಲಿ ಸಿಸೋಡಿಯಾ ಅವರ ಜಾಮೀನು ಅರ್ಜಿಯ ಆದೇಶವನ್ನು ನ್ಯಾಯಮೂರ್ತಿ ಸ್ವರ್ಣ ಕಾಂತ ಶರ್ಮಾ ಅವರ ಪೀಠವು ಕಾಯ್ದಿರಿಸಿತ್ತು.

ಈ ಪ್ರಕರಣದಲ್ಲಿ ಎರಡನೇ ಬಾರಿಗೆ ಸಿಸೋಡಿಯಾ ಅವರ ಜಾಮೀನು ಅರ್ಜಿಗಳನ್ನು ವಜಾಗೊಳಿಸಿದ ರೋಸ್ ಅವೆನ್ಯೂ ಕೋರ್ಟ್, " ಈ ಹಂತದಲ್ಲಿ ನಿಯಮಿತ ಅಥವಾ ಮಧ್ಯಂತರ ಜಾಮೀನಿಗೆ ಅರ್ಜಿದಾರರನ್ನು ಒಪ್ಪಿಕೊಳ್ಳಲು ಈ ನ್ಯಾಯಾಲಯವು ಒಲವು ಹೊಂದಿಲ್ಲ. ಪರಿಗಣನೆಯಲ್ಲಿರುವ ಅರ್ಜಿಯು ಅದರಂತೆ ವಜಾಗೊಳಿಸಲಾಗಿದೆ" ಎಂದು ಹೇಳಿತ್ತು.

## ಭಾರತಕ್ಕೆ ಐತಿಹಾಸಿಕ ದಿನ, ಮರಿಯಪ್ಪನ್ ತಂಗವೇಲು, ಸುಮಿತ್ ಆಂಟಿಲ್, ಏಕ್ತಾ ಭಯಾನ್‌ಗೆ ಚಿನ್ನ

■ವಿಜಯಸಾಕ್ಷಿ ಸುದ್ದಿ, ಟೋಕಿಯೊ




ವಿಶ್ವ ಪ್ಯಾರಾ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್ ನಲ್ಲಿ ಭಾರತದ ಅಥ್ಲೀಟ್ ಗಳು ಐತಿಹಾಸಿಕ ಸಾಧನೆ ಮಾಡಿದ್ದು, ಭಾರತದ ಮರಿಯಪ್ಪನ್ ತಂಗವೇಲು, ಸುಮಿತ್ ಆಂಟಿಲ್, ಏಕ್ತಾ ಭಯಾನ್ ಚಿನ್ನದ ಪದಕಕ್ಕೆ ಮುತ್ತಿಟ್ಟಿದ್ದಾರೆ.

ಟೋಕಿಯೋ ಪ್ಯಾರಾಲಿಂಪಿಕ್ಸ್ ಬೆಳ್ಳಿ ಪದಕ ವಿಜೇತ ಕ್ರೀಡಾಪಟು ಮರಿಯಪ್ಪನ್ ತಂಗವೇಲು ಖಿ63 ಹೈಜಂಪ್ ವಿಭಾಗದಲ್ಲಿ 1.88 ಮೀಟರ್ ಎತ್ತರಕ್ಕೆ ಜಿಗಿಯುವ ಮೂಲಕ ದಾಖಲೆಯೊಂದಿಗೆ ಚಿನ್ನದ ಪದಕವನ್ನು ತಮ್ಮದಾಗಿಸಿಕೊಂಡರು. ಎಂಟು ವರ್ಷಗಳಲ್ಲಿ ಪ್ರಮುಖ ಕೂಟವೊಂದರಲ್ಲಿ ಇದು ಅವರ ಮೊದಲ ಚಿನ್ನದ ಪದಕವಾಗಿದೆ.

### ರೋಟರಿ ಸಂಸ್ಥೆಯ ಸಾಪ್ತಾಹಿಕ ಸಭೆಯಲ್ಲಿ ಡಾ. ಶಿವಕುಮಾರ ಸರ್ವಿ

# ಪ್ರಕೃತಿಗೆ ತಕ್ಕಂತೆ ಆಹಾರ ಸೇವಿಸಿ

■ವಿಜಯಸಾಕ್ಷಿ ಸುದ್ದಿ, ಗದಗ




ಆಯುರ್ವೇದ ಔಷಧಿ ಪದ್ಧತಿಯು ತ್ರಿದೋಷಗಳೆಂದು ಕರೆಯುವ ವಾತ, ಪಿತ್ತ, ಕಫ ಇವುಗಳ ಮೇಲೆ ಆಧಾರಿತವಾಗಿದ್ದು, ಪ್ರತಿಯೊಬ್ಬರೂ ವಿಭಿನ್ನ ಪ್ರಕೃತಿಯವರಾಗಿರುತ್ತಾರೆ. ಅವರು ತಮ್ಮ ಪ್ರಕೃತಿಗೆ ತಕ್ಕಂತೆ ಆಹಾರ ಸೇವಿಸುವುದರಿಂದ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು ಎಂದು ರಾಜೀವಗಾಂಧಿ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಉಪನ್ಯಾಸಕ ಡಾ. ಶಿವಕುಮಾರ ಸರ್ವಿ ತಿಳಿಸಿದರು.

ರೋಟರಿ ಸಂಸ್ಥೆ ಗದಗ–ಬೆಟಗೇರಿಯ ಸಾಪ್ತಾಹಿಕ ಸಭೆಗೆ ಅತಿಥಿಗಳಾಗಿ ಆಗಮಿಸಿ, ಆಯುರ್ವೇದ ಕುರಿತು ಅವರು ಉಪನ್ಯಾಸ ನೀಡಿದರು.

ರೋಟರಿ ಸಂಸ್ಥೆಯ ಅಧ್ಯಕ್ಷ ರೊ. ಚಂದ್ರಮೌಳಿ ಜಾಲಿ ಸ್ವಾಗತಿದರು. ಅಸಿಸ್ಟಂಟ್ ಗವರ್ನರ್ ರೊ. ಶರಣಬಸಪ್ಪ ಗುಡಿಮನಿ, ರೊ. ಮಹೇಶ ಕುಂದ್ರಾಳಹಿರೇಮಠ, ಸಂಸ್ಥೆಯ ಕಾರ್ಯದರ್ಶಿ ವೀಣಾ ತಿರ್ಲಾಪೂರ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ರೋಟರಿ ಸಂಸ್ಥೆಯ ಸದಸ್ಯರಾದ ರೊ. ಶ್ರೀಧರ ಸುಲ್ತಾನಪೂರ, ರೊ. ಡಾ.ಶೇಖರ ಡಿ.ಸಜ್ಜನರ, ರೊ. ಶಿವಾಚಾರ್ಯ ಹೊಸಳ್ಳಿಮಠ, ರೊ. ಇಂ. ಮಹಾಂತೇಶ ಬಾತಾಖಾನಿ, ರೊ. ಹೆಚ್.ಎಸ್. ಪಾಟೀಲ, ರೊ. ವಿಶ್ವನಾಥ ಯಳಮಲಿ, ರೊ. ಸುರೇಶ ಕುಂಬಾರ, ರೊ. ಅನಿಲ ಹಂದ್ರಾಳ, ರೊ. ಡಾ. ಎಸ್.ಕೆ. ನಾಲತ್ತವಾಡಮಠ, ರೊ. ಡಾ. ಪ್ರದೀಪ ಉಗಲಾಟ, ರೊ. ಕೊಟ್ರೇಶ ಹಿರೇಗೌಡರ, ರೊ.ಡಾ. ಕಮಲಾಕ್ಷಿ ಅಂಗಡಿ, ರೊ. ನರೇಶ ಜೈನ, ರೊ. ಸಂತೋಷ ಅಕ್ಕಿ, ರೊ.ಡಾ. ಆರ್.ಬಿ. ಉಪ್ಪಿನ ಮುಂತಾದವರು ಉಪಸ್ಥಿತರಿದ್ದರು. ಕಾರ್ಯದರ್ಶಿ ವೀಣಾ ತಿರ್ಲಾಪೂರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಹಿಂದೂ ಸಂಸ್ಕೃತಿಯ ಹಬ್ಬಗಳಲ್ಲಿ ತಯಾರಿಸುವ ಆಹಾರ ವಿಧಾನವು ವೈಜ್ಞಾನಿಕವಾಗಿದ್ದು, ಅದನ್ನು ಅನುಸರಿಸುವುದು ಉತ್ತಮ. ಆಯುರ್ವೇದ ಶಾಸ್ತ್ರವು ಪ್ರತಿಯೊಂದು ದೋಷವು ಅಸಮತೋಲನನವಾದಾಗ ಯಾವ ರೀತಿ ದೇಹದ ಮೇಲೆ ಪರಿಣಾಮ ಬೀರುತ್ತದೆ ಎಂಬುದನ್ನು ಸ್ಪಷ್ಟವಾಗಿ ತಿಳಿಸಿದ್ದು, ಅದನ್ನು ಸಮತೋಲನ ಮಾಡುವ ವಿಧಾನವನ್ನು ತಿಳಿಸಿರುವ ಅತಿ ಪುರಾತನವಾದ ಔಷಧ ಪದ್ಧತಿಯಾಗಿದೆ ಎಂದು ಡಾ. ಶಿವಕುಮಾರ ಸರ್ವಿ ವಿವರಿಸಿದರು.

### ಅಣ್ಣಿಗೇರಿ ಗುರುಗಳ ಆಶ್ರಮದ ಆಧ್ಯಾತ್ಮ, ಶೈಕ್ಷಣಿಕ ಚಿಂತನ ಮಾಲಿಕೆಯಲ್ಲಿ ಶಿವಕುಮಾರ ಪಾಟೀಲ

# ಉಚಿತ ಪಾಠ ಬೋಧನೆ ನಿತ್ಯ ನಿರಂತರ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಬಿ.ಜಿ. ಅಣ್ಣಿಗೇರಿ ಗುರುಗಳ ಗುರುಕುಲ ಆಶ್ರಮದಲ್ಲಿ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಗೆ ಉಚಿತ ಪಾಠ ಬೋಧನೆ ನಿತ್ಯ ನಿರಂತರವಾಗಿ ಮುನ್ನಡೆಯಲಿದೆ ಎಂದು 'ಶಿಕ್ಷಣ ಪ್ರೇಮಿ, ತ್ಯಾಗಜೀವಿ ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನ ಗದಗ'ದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ ಹೇಳಿದರು.

ಅವರು ಅಣ್ಣಿಗೇರಿ ಗುರುಗಳ ಆಶ್ರಮದಲ್ಲಿ ಆಧ್ಯಾತ್ಮ ಮತ್ತು ಶೈಕ್ಷಣಿಕ ಚಿಂತನ ಮಾಲಿಕೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಬಿ.ಜಿ. ಅಣ್ಣಿಗೇರಿ ಗುರುಗಳು ಗದುಗಿನ ಸಿ.ಎಸ್. ಪಾಟೀಲ ಪ್ರೌಢಶಾಲೆಯಲ್ಲಿ ಶಿಕ್ಷಕರಾಗಿ, ಮುಖ್ಯಾಧ್ಯಾಪಕರಾಗಿ ಸೇವೆ ಸಲ್ಲಿಸಿದ್ದಲ್ಲದೆ ತಾವು ವಾಸವಾಗಿದ್ದ ಕೊಠಡಿಯಲ್ಲಿ ತಮ್ಮೊಂದಿಗೆ ವಿದ್ಯಾರ್ಥಿಗಳಿಗೆ ಆಶ್ರಯ ನೀಡಿ ಪಾಠ ಬೋಧನೆ ಪ್ರಾರಂಭಿಸಿದರು. ಕಾಲಕ್ರಮೇಣ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾದಂತೆ ಅದು ಗುರುಕುಲ ಮಾದರಿಯಲ್ಲಿ ನಡೆದು ಬಂದಿರುವದು ಇತಿಹಾಸ ಎಂದು ಬಣ್ಣಿಸಿದರು.

ಗದಗ-ಬೆಟಗೇರಿ ಅವಳಿ ನಗರ ಅಷ್ಟೇ ಅಲ್ಲದೆ ಗದಗ ಜಿಲ್ಲೆಯ ಸುತ್ತಮುತ್ತಲಿನ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಶಾಲೆಗೆ ಹೋಗುವ ಮುನ್ನ, ಶಾಲೆ ಬಿಟ್ಟ ನಂತರ ಆಶ್ರಮದಲ್ಲಿ ಟ್ಯೂಶನ್ ಹೇಳಿಸಿಕೊಂಡು ಮುಂದೆ ಅವರು ಉನ್ನತ ಶಿಕ್ಷಣ ಪಡೆದು ದೊಡ್ಡ



ಸ್ಥಾನದಲ್ಲಿರುವದು ಹೆಮ್ಮೆಯ ಸಂಗತಿ ಎಂದರು.

ಗುರುಗಳ ತರುವಾಯ ಈ ಆಶ್ರಮವನ್ನು ಪ್ರತಿಷ್ಠಾನದ ಗೌರವ ಅಧ್ಯಕ್ಷರಾಗಿರುವ ಗದುಗಿನ ಜ. ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ಕೃಪಾಪೋಷಣೆಯೊಂದಿಗೆ ಪ್ರತಿಷ್ಠಾನದ ಎಲ್ಲ ಪದಾಧಿಕಾರಿಗಳು, ಗುರುಗಳ ಹಳೇ ವಿದ್ಯಾರ್ಥಿಗಳು, ಶಿಕ್ಷಣ ಪ್ರೇಮಿಗಳು ಸಾಕಷ್ಟು ಅಭಿವೃದ್ಧಿಯೊಂದಿಗೆ ಮುನ್ನಡೆಸಿಕೊಂಡು ಬಂದಿದ್ದಾರೆ ಎಂದರು.

ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯ ಫಲಿತಾಂಶ ಪ್ರಕಟವಾಗಿದ್ದು, ಆಶ್ರಮದಲ್ಲಿ ಪಾಠ ಹೇಳಿಸಿಕೊಂಡ ಬಹುತೇಕ ವಿದ್ಯಾರ್ಥಿಗಳು ಟಾಪರ್ ಹಾಗೂ ಪ್ರಥಮ ದರ್ಜೆಯಲ್ಲಿ ಪಾಸಾಗಿರುವದು ಹೆಮ್ಮೆಯ ಸಂಗತಿ. ಗುರುಗಳು ಇದ್ದಾಗ ಮತ್ತು ಅವರ ತರುವಾಯ ಅವರ ಶಿಷ್ಯ ಬಳಗ ಆಶ್ರಮಕ್ಕೆ ಬಂದು ಮಕ್ಕಳಿಗೆ ಉಚಿತ ಪಾಠ ಹೇಳುತ್ತಿರುವದು ಅಭಿನಂದನೀಯ ಎಂದರಲ್ಲದೆ, ಉಚಿತ ಟ್ಯೂಶನ್‌ಗೆ ವಿದ್ಯಾರ್ಥಿಗಳ ಸಂಖ್ಯೆಯೂ ಹೆಚ್ಚುತ್ತಿದ್ದು, ಅದಕ್ಕಾಗಿ ಆಶ್ರಮದ ಮೇಲ್ಚಾವಣಿಯಲ್ಲೂ ಪಾಠ ಮುಂದುವರೆಸಲಾಗಿದೆ ಎಂದು ಹೇಳಿದರು.

ಗದಗ ಜಿಲ್ಲೆಯ ಸರಕಾರಿ ಪ್ರೌಢಶಾಲೆಗಳಲ್ಲಿ ಅಧ್ಯಯನ ಮಾಡಿ ಶಾಲೆಗೆ ಮೊದಲ ಮೂರು ಸ್ಥಾನಗಳನ್ನು ಪಡೆದುಕೊಂಡ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಪ್ರತಿಷ್ಠಾನದಿಂದ ಪ್ರತಿಭಾ ಪುರಸ್ಕಾರವಾಗಿ ನಗದು ಬಹುಮಾನ ಹಾಗೂ ಕಲಿಕಾ ಸಾಮಗ್ರಿಗಳನ್ನು ಕಳೆದೆರಡು ವರ್ಷಗಳಿಂದ ನೀಡುತ್ತಿದ್ದು ಈ ವರ್ಷವೂ ಜೂನ್ ಎರಡನೇ ವಾರದಲ್ಲಿ ಪ್ರತಿಭಾ ಪುರಸ್ಕಾರ ನೀಡಲಾಗುವದು ಎಂದರು.

ಸಮಾರಂಭದಲ್ಲಿ ಪ್ರತಿಷ್ಠಾನದ ಉಪಾಕ್ಷರೂ ಬಿ.ಜಿ.ಅಣ್ಣಿಗೇರಿ ಗುರುಗಳ ಸಹೋದರರೂ ಆದ ಶಂಕ್ರಪ್ಪ ಜಿ.ಅಣ್ಣಿಗೇರಿ, ಕಾರ್ಯದರ್ಶಿ ಶಿವಪ್ಪ ಕತ್ತಿ, ಖಜಾಂಚಿ ಸಿದ್ಧಲಿಂಗನಗೌಡ ಪಾಟೀಲ, ನಿರ್ದೇಶಕರಾದ ಶಿವಾನಂದ ದಂಡಿನ, ವಿರುಪಾಕ್ಷಪ್ಪ ವ್ಯಾಗೇರಿ, ಚನ್ನಪ್ಪ ಮಲ್ಲಾಡದ, ತೋಂಟೇಶ ವೀರಲಿಂಗಯ್ಯನಮಠ, ವಿರುಪಾಕ್ಷಪ್ಪ ಶಾಂತಗೇರಿ, ಕಳಕಪ್ಪ ಕುರ್ತಕೋಟಿ, ಬಸವರಾಜ ಬಿಂಗಿ, ಸಿದ್ದಣ್ಣ ಕವಲೂರ, ರವಿ ದಂಡಿನ ಉಪಸ್ಥಿತರಿದ್ದು ಆಶ್ರಮದ ಪ್ರಗತಿ ಪರಿಶೀಲನೆ, ಪ್ರತಿಭಾ ಪುರಸ್ಕಾರದ ರೂಪುರೇಷೆಗಳ ಬಗ್ಗೆ ಚರ್ಚಿಸಿದರು.

#### ವಸತಿ, ಊಟದೊಂದಿಗೆ ಪಾಠವೂ ಉಚಿತ

ಆಶ್ರಮದಲ್ಲಿ 8ರಿಂದ 10ನೇ ತರಗತಿಯ ಸುಮಾರು 300ಕ್ಕೂ ಹೆಚ್ಚು ಮಕ್ಕಳಿಗೆ ನಿತ್ಯ ಉಚಿತ ಪಾಠ ಹೇಳಲಾಗುತ್ತಿದೆ. ಗ್ರಾಮೀಣ ಪ್ರದೇಶದ ಸುಮಾರು 50ಕ್ಕೂ ಹೆಚ್ಚು ಮಕ್ಕಳು ಆಶ್ರಮದಲ್ಲಿದ್ದು, ಅವರಿಗೆ ಉಚಿತ ವಸತಿ, ಊಟ, ಪಾಠ ವ್ಯವಸ್ಥೆ ಮಾಡಲಾಗಿದೆ.ಇದಕ್ಕೆ ದಾನಿಗಳ ಸಹಕಾರವೂ ಇದೆ.

– ಶಂಕ್ರಪ್ಪ ಜಿ.ಅಣ್ಣಿಗೇರಿ.
ಪ್ರತಿಷ್ಠಾನದ ಉಪಾಧ್ಯಕ್ಷರು.

## 'ನಮ್ಮ ಗದಗ ಕ್ರಿಕೆಟರ್ಸ್' ತಂಡಕ್ಕೆ ಜಯ



■ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ಬಿಡಿಕೆ ಸ್ಪೋರ್ಟ್ಸ್ ಫೌಂಡೇಶನ್ ಆಶ್ರಯದಲ್ಲಿ ನಡೆಯುತ್ತಿರುವ ಹುಬ್ಬಳ್ಳಿ ಪ್ರೀಮಿಯರ್ ಲೀಗ್ ಜೂನಿಯರ್ 5ನೇ ಆವೃತ್ತಿಯ ಮೊದಲ ಕ್ರಿಕೆಟ್ ಪಂದ್ಯದಲ್ಲಿ ನಮ್ಮ ಸಿಡಿಎಂ ಜೆಮ್ಸ್ ಹುಬ್ಬಳ್ಳಿ ವಿರುದ್ಧ ನಮ್ಮ ಗದಗ ಕ್ರಿಕೆಟರ್ಸ್ ತಂಡ 7 ವಿಕೆಟ್‌ಗಳ ಜಯ ಗಳಿಸಿದೆ.

ಟಾಸ್ ಗೆದ್ದ ನಮ್ಮ ಗದಗ ಕ್ರಿಕೆಟರ್ಸ್ ತಂಡ್ಡವರು ಮೊದಲು ಫೀಲ್ಡಿಂಗ್ ಆಯ್ಕೆ ಮಾಡಿಕೊಂಡರು. ಸಿಡಿಎಂ ಜೆಮ್ಸ್ ತಂಡ 20.3 ಓವರ್‌ಗಳಲ್ಲಿ 68/10ಕ್ಕೆ ಆಲ್‌ಔಟ್ ಆದರು.

ನಮ್ಮ ಗದಗ ಕ್ರಿಕೆಟರ್ಸ್ ತಂಡದ ಬೌಲರ್‌ಗಳಾದ ಹರ್ಷ ಶಂಕೆ, ಸ್ವರೂಪ ಸೋಲಂಕಿ, ಪ್ರೀತಂ ಸುಂಕಾಪುರ ಬೌಲಿಂಗ್ ದಾಳಿಯಲ್ಲಿ ಮೇಲುಗೈ ಸಾಧಿಸಿದರು. ಪ್ರತಿಯಾಗಿ ನಮ್ಮ ಗದಗ ಆಟಗಾರರು 18.5 ಓವರ್‌ಗಳಲ್ಲಿ 71/3 ಗಳಿಸಿದರು. ಆರಂಭಿಕರಾಗಿ ಮೊಯಿನ್ ಮುಲ್ಲಾ, ಪ್ರಸಾದ್ ಉಣ್ಣಿಮಠ 40 ರನ್‌ಗಳ ಜೊತೆಯಾಟ ಆಡಿದರು. ಪ್ರಸಾದ್ 23 ರನ್‌ಗಳ ಉತ್ತಮ ಇನ್ನಿಂಗ್ಸ್‌ಗಳನ್ನು ಗಳಿಸಿದರು. ನಮ್ಮ ಗದಗ ಕ್ರಿಕೆಟರ್ಸ್‌ನ ಹರ್ಷ ಶಂಕೆ ಉತ್ತಮ ಬೌಲಿಂಗ್ ಮಾಡಿ ಪಂದ್ಯ ಪುರುಷ ಪ್ರಶಸ್ತಿ ಪಡೆದರು.

ನಮ್ಮ ಗದಗ ಕ್ರಿಕೆಟರ್ಸ್ ತಂಡದಲ್ಲಿ ಪ್ರೀತಂ ಸುಂಕಾಪೂರ, ಸ್ವರೂಪ ಸಚಿನ್, ಆರುಷ್ ಪುಥಾರಣ, ಮನೀಷ್ ನರನುರ, ಕ್ರಥನ್ ಕುಲಕರ್ಣಿ, ಆರ್ಯನ್ ಮೆರವಾಡೆ, ಸಂಕೇತ ಕುಷ್ಟಗಿ, ಅಮೂಲ್ ಸಂತೋಷ, ಆರ್ಯನ್ ಪಿ, ಬೆನಕಾ ಹೊಸಮನಿ, ಚಂದ್ರಣ್ಣ ಮನಗುಂಡಿ, ನಿತಿನ್ ಬದಿ, ಪ್ರಸಾದ ಉನ್ನಿಮಠ, ಸಮರ್ಥ ನುಗ್ಗಿಕೇರಿ, ಸುಜಲ್ ಬಸಂತಿ, ಹರ್ಷಾ ಶಾಂಕೆ, ಮೊಹ್ಮದಮೊಯಿನ್ ಮುಲ್ಲಾ ಆಡಿದರು.

ಬಿಸಿಸಿಐ ಲೆವೆಲ್-1 ಅಂಪೈರ್ ಹಾಗೂ ಬಿಸಿಸಿಐನ ಲೆವೆಲ್-ಓ ಕೋಚ್ ಮಲ್ಲಿಕಾರ್ಜುನ ಭೂಪಾನಿ ಸೇರಿದಂತೆ ಜಾನೋಪಂತರ ಕ್ರಿಕೆಟ್ ಅಕಾಡೆಮಿಯ ಹಿರಿಯ ಕ್ರಿಕೆಟ್ ಪಟು ವೀರಣ್ಣ ಜಾನೋಪಂತರ, ಮಂಜುನಾಥ ಕಾಳೆ, ಶಿವಕುಮಾರ ಕುಷ್ಟಗಿ ಕ್ರೀಡಾಂಗಣದಲ್ಲಿದ್ದರು.



ಗದಗ: ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ಗದಗ ಜಿಲ್ಲಾ ಗೌರವಾಧ್ಯಕ್ಷ ಹಾಗೂ ಗದಗ ಜಿಲ್ಲಾ ಓಬಿಸಿ ಇಲಾಖೆಯ ಗದಗ ತಾಲೂಕು ಅಧಿಕಾರಿಗಳಾಗಿರುವ ಡಾ. ಬಸವರಾಜ ಬಳ್ಳಾರಿ ಅವರು 75 ಕೆಜಿ ವೇಟ್ ಲಿಫ್ಟಿಂಗ್ ಮಾಡಿರುವ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ರಾಜ್ಯ ಉಪಾಧ್ಯಕ್ಷ ರವಿ ಗುಂಜೀಕರ ಅವರು 2024-25ನೇ ಸಾಲಿನ ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಿಬ್ಬಂದಿಗಳ ಪುನಶ್ಚೇತನ ಸಮಾರಂಭದಲ್ಲಿ ಅವರನ್ನು ಗೌರವಿಸಿ, ಪ್ರಮಾಣಪತ್ರ ನೀಡಿದರು.

### ಶ್ರೀ ದತ್ತ ಭಕ್ತ ಮಂಡಳಿಯ ವತಿಯಿಂದ ಜಗದ್ಗುರು ಶಂಕರಾಚಾರ್ಯರ ಜಯಂತಿ ಆಚರಣೆ

## ಜಗದ ಮೊದಲ ಆಚಾರ್ಯರು ಶಂಕರಾಚಾರ್ಯರು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಜಗತ್ತಿನಲ್ಲಿ ಸನಾತನ ಧರ್ಮವು ಅಳಿವಿನ ಅಂಚಿನಲ್ಲಿದ್ದಾಗ ಅದನ್ನು ಉಳಿಸಿ, ಬೆಳೆಸಲು ಅವತರಿಸಿ ಬಂದವರು ಜಗದ್ಗುರು ಶಂಕರಾಚಾರ್ಯರು. 8ನೇ ಶತಮಾನದಲ್ಲಿ ಅವರು ಜನ್ಮ ತಾಳಿ ಕೇವಲ 32ವರ್ಷಗಳಲ್ಲಿ ಇನ್ನಿಲ್ಲದ ಸಾಧನೆ ಮಾಡಿದ ಅವರು ಈ ಜಗದ ಮೊದಲ ಆಚಾರ್ಯರು ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಶ್ರೀ ದತ್ತ ಭಕ್ತ ಮಂಡಳಿಯ ವತಿಯಿಂದ ಆಚರಿಸಲಾದ ಜಗದ್ಗುರು ಶಂಕರಾಚಾರ್ಯರ ಜಯಂತಿ ಕಾರ್ಯಕ್ರಮದಲ್ಲಿ ಅವರು ಶ್ರೀ ಶಂಕರರ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಒಳ್ಳೆಯ ಗುರುಗಳಿಗೆ ಒಬ್ಬ ಒಳ್ಳೆಯ ಶಿಷ್ಯ ದೊರಕುವುದು ಅಷ್ಟು ಸುಲಭದ ಮಾತಲ್ಲ. ಗೋವಿಂದ



ಭಗವತ್ಪಾದರ ಬಳಿ ಇವರು ಶಿಷ್ಯತ್ವ ಕೋರಿ ಹೋದಾಗ ಈ ಚಿಕ್ಕ ಬಾಲಕನಿಗೆ ಏನು ಹೇಳುವುದು ಎಂದು ತಿಳಿಯದೆ ಅವನನ್ನು ಸಾಗ ಹಾಕಲು ಗುರುಗಳು ಶ್ರೀ ವಿಷ್ಣು ಸಹಸ್ರನಾಮಕ್ಕೆ ಭಾಷ್ಯ ಬರೆದು ಕೊಂಡು ಬರಲು ಹೇಳಿದರು. ಇದರಿಂದ ಅವನ ಶಿಷ್ಯತ್ವವನ್ನು ಒಂದೆರಡು ವರ್ಷಗಳ ಕಾಲ ಮುಂದೂಡಬಹುದೆಂಬ ಅವರ ನಿರೀಕ್ಷೆ ಸುಳ್ಳಾಯಿತು. ಮರುದಿನವೇ ಅದಕ್ಕೆ ಭಾಷ್ಯೆ ಬರೆದುಕೊಂಡು ಹೋದ ಶಂಕರರು ಗುರುಗಳ ಶಿಷ್ಯತ್ವವನ್ನು ಸಂಪಾದಿಸುವಲ್ಲಿ ಯಶಸ್ವಿಯಾದರು ಎಂಬುದನ್ನು ತಿಳಿದರೆ ಅವರಲ್ಲಿ ಆಧ್ಯಾತ್ಮದ ಹಸಿವು ಅದೆಷ್ಟಿತ್ತು ಎಂಬುದು ತಿಳಿಯುತ್ತದೆ ಎಂದು ವಿವರಿಸಿದರು.

ಶ್ರೀ ಶಂಕರಾಚಾರ್ಯರ ಭಾವಚಿತ್ರಕ್ಕೆ ವೇ.ಮೂ. ಶ್ರೀವಲ್ಲಭಭಟ್ಟ ಸದರಜೋಷಿ ಪೂಜೆ ನೆರವೇರಿಸಿದರು. ನಂತರ ಶ್ರೀ ದತ್ತಾತ್ರೇಯನಿಗೆ ಪಲ್ಲಕ್ಕಿ ಸೇವೆ ನಡೆಯಿತು. ಈ ಸಂದರ್ಭದಲ್ಲಿ ಶೇಷಗಿರಿ ಕುಲಕರ್ಣಿ, ಬಿ.ಎಲ್. ಕುಲಕರ್ಣಿ, ಶ್ರೀ ದತ್ತಭಕ್ತ ಮಂಡಳಿ ಅಧ್ಯಕ್ಷ ಡಾ. ನಾಗರಾಜ ಗ್ರಾಮಪುರೋಹಿತ, ಉಪಾಧ್ಯಕ್ಷ ಆದರ್ಶ ಕುಲಕರ್ಣಿ, ಕಾರ್ಯದರ್ಶಿ ರಘುನಾಥ ಕೊಂಡಿ, ಖಜಾಂಚಿ ಮಂಜುನಾಥ ಗ್ರಾಮಪುರೋಹಿತ, ಸಹ ಕಾರ್ಯದರ್ಶಿ ಪ್ರಕಾಶ ಕಾಳೆ, ನಿವೃತ್ತ ಉಪನ್ಯಾಸಕ ಎಸ್.ಎಚ್. ಕುಲಕರ್ಣಿ, ಎ.ಜಿ. ಕುಲಕರ್ಣಿ, ಗುರುರಾಜ ಕುಲಕರ್ಣಿ, ವಿಶ್ವನಾಥಭಟ್ಟ ಗ್ರಾಮಪುರೋಹಿತ, ಜಗನ್ನಾಥ ಸೂರಭಟ್ಟನವರ, ವಿನಾಯಕ ಗ್ರಾಮಪುರೋಹಿತ, ಮುಕುಂದಭಟ್ಟ ಸೂರಭಟ್ಟನವರ, ಅಜಿತ ಕುಲಕರ್ಣಿ, ಪ್ರಶಾಂತ ಗ್ರಾಮಪುರೋಹಿತ, ಕಿರಣ ಕಾಳೆ, ರಾಮಕೃಷ್ಣ ಸದರಜೋಷಿ, ಪವನ ಗ್ರಾಮಪುರೋಹಿತ ಇನ್ನೂ ಮುಂತಾದವರು ಉಪಸ್ಥಿತರಿದ್ದರು.

## ಮಮತಾ ವಿರುದ್ಧ ಅವಹೇಳನ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ್ದಕ್ಕಾಗಿ ಕೇಂದ್ರ ಚುನಾವಣಾ ಆಯೋಗವು ಬಿಜೆಪಿಯ ತಮ್ಲುಕ್ ಅಭ್ಯರ್ಥಿ ಅಭಿಜಿತ್ ಗಂಗೋಪಾಧ್ಯಾಯ ಅವರ ಹೇಳಿಕೆಯನ್ನು ಖಂಡಿಸಿದ್ದು, ಮಂಗಳವಾರ ಸಂಜೆ 5 ರಿಂದ 24 ಗಂಟೆಗಳ ಕಾಲ ಪ್ರಚಾರ ಮಾಡದಂತೆ ನಿರ್ಬಂಧಿಸಿದೆ.

ಕಲ್ಕತ್ತಾ ಹೈಕೋರ್ಟ್‌ನ ನ್ಯಾಯಮೂರ್ತಿ ಸ್ಥಾನದಿಂದ ಕೆಳಗಿಳಿದು ಲೋಕಸಭೆ ಚುನಾವಣೆಗೆ ಸ್ಪರ್ಧಿಸಲು ಬಿಜೆಪಿಗೆ ಸೇರ್ಪಡೆಗೊಂಡಿದ್ದ ಗಂಗೋಪಾಧ್ಯಾಯ ಅವರಿಗೆ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವಾಗ ಸಾರ್ವಜನಿಕ ಹೇಳಿಕೆಗಳ ಬಗ್ಗೆ ಜಾಗರೂಕರಾಗಿರಿ ಎಂದು ಮಂಗಳವಾರ ಎಚ್ಚರಿಸಲಾಗಿದೆ, ಚುನಾವಣಾ ಆಯೋಗದ ಆದೇಶ ಮುಂದಿನ ದಿನಗಳಲ್ಲಿ ತೃಣಮೂಲ ಕಾಂಗ್ರೆಸ್ ಮೇ 16 ರಂದು ದೂರು ನೀಡಿದ ನಂತರ ಈ ಬೆಳವಣಿಗೆ ನಡೆದಿದೆ.

ಚುನಾವಣಾ ಆಯೋಗದ ಆದೇಶವು ಹೀಗೆ ಹೇಳಿದೆ, "ಮೇಲೆ ತಿಳಿಸಿದ ದುಷ್ಕೃತ್ಯಕ್ಕಾಗಿ ಆಯೋಗವು ಅಭಿಜಿತ್ ಗಂಗೋಪಾಧ್ಯಾಯರನ್ನು ಬಲವಾಗಿ ಖಂಡಿಸುತ್ತದೆ ಮತ್ತು ಮೇ 21, 2024 ರಿಂದ 24 ಗಂಟೆಗಳ ಕಾಲ ಪ್ರಚಾರ ಮಾಡದಂತೆ ಅವರನ್ನು ತಡೆಹಿಡಿಯುತ್ತದೆ" ಎಂದು ಹೇಳಿದೆ.

ಮೇ 15 ರಂದು ತಾಮ್ಲುಕ್ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಹಲ್ದಿಯಾದಲ್ಲಿ ನಡೆದ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ್ದ ಮಾಜಿ ನ್ಯಾಯಾಧೀಶರು, "ಮಮತಾ ಬ್ಯಾನರ್ಜಿ ನೀವು ಎಷ್ಟು ಬೆಲೆಗೆ ಮಾರಾಟವಾಗುತ್ತಿದ್ದೀರಿ? ನಿಮ್ಮ ದರ 10 ಲಕ್ಷ ರೂಪಾಯಿ ಏಕೆ? ಕೀಯಾ ಸೇಠ್‌ನಿಂದ ನಿಮ್ಮ ಮೇಕಪ್ ಮಾಡಿಸಿಕೊಳ್ಳಲು ಕಾರಣವೇ? ಮಮತಾ ಬ್ಯಾನರ್ಜಿ ಮಹಿಳೆಯಾದರೂ? ಕೆಲವೊಮ್ಮೆ ನಾನು ಆಶ್ಚರ್ಯ ಪಡುತ್ತೇನೆ" ಎಂದು ಆಕ್ಷೇಪಾರ್ಹ ಹೇಳಿಕೆ ನೀಡಿದ್ದರು.

ಮೇ 17 ರಂದು, ಚುನಾವಣಾ ಆಯೋಗವು ತೃಣಮೂಲ ಸಲ್ಲಿಸಿದ ದೂರಿನ ಪರಿಗಣನೆಗೆ ತೆಗೆದುಕೊಂಡಿತು. ತನ್ನ ಮೊದಲ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸುತ್ತಿರುವ ಮಾಜಿ ಹೈಕೋರ್ಟ್ ನ್ಯಾಯಾಧೀಶರಿಗೆ ಶೋಕಾಸ್ ನೋಟಿಸ್ ನೀಡಿತು. ಗಂಗೂಲಿ ಅವರು ಸೋಮವಾರ ಬಂಗಾಳದ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಗೆ ತಮ್ಮ ಉತ್ತರವನ್ನು ಸಲ್ಲಿಸಿದ್ದು, ಅದನ್ನು ದೆಹಲಿಯ ನಿರ್ವಚನ ಸದನ್‌ಗೆ ರವಾನಿಸಲಾಗಿದೆ.

ಗಂಗೋಪಾಧ್ಯಾಯ ಭಾಷಣದಲ್ಲಿ ನೀಡಿದ ಹೇಳಿಕೆ ಮತ್ತು ಅವರ ಉತ್ತರವನ್ನು ಪರಿಶೀಲಿಸಿದ ನಂತರ, ಗಂಗೂಲಿ ಅವರು "ಕೆಳಮಟ್ಟದ ವೈಯಕ್ತಿಕ ದಾಳಿಯನ್ನು ಮಾಡಿದ್ದಾರೆ ಮತ್ತು ಹೀಗಾಗಿ ಮಾದರಿ ನೀತಿ ಸಂಹಿತೆಯನ್ನು ಉಲ್ಲಂಘಿಸಿದ್ದಾರೆ" ಎಂದು ಆಯೋಗ ತೀರ್ಮಾನಿಸಿತು.

"ಗಂಗೋಪಾಧ್ಯಾಯ ಹೇಳಿಕೆಯು ಭಾರತದಲ್ಲಿ ಮಹಿಳೆಯರ ಸ್ಥಾನಮಾನದ ಸವೆತದ ಮೇಲೆ ನೇರವಾದ ಅವಮಾನ. ಅಂತಹ ಹೇಳಿಕೆಯು ಯಾವುದೇ ಮಹಿಳೆಗೆ ಸಂಬಂಧಿಸಿದಂತೆ ಬಳಸಿದಾಗ ಅದು ಸಂಪೂರ್ಣವಾಗಿ ಖಂಡನೀಯವಾಗಿದೆ. ಆದರೆ, ಹಿರಿಯ ರಾಜಕೀಯ ನಾಯಕ ಮತ್ತು ಸಾಂವಿಧಾನಿಕ ಹುದ್ದೆಯನ್ನು ಹೊಂದಿರುವವರ ಬಗ್ಗೆ ಮಾತನಾಡುವಾಗ, ಅವರು ಯಾರನ್ನು ಗುರಿಯಾಗಿಸಿಕೊಂಡಿದ್ದಾನೆ ಎಂಬುದು ಗೊತ್ತಿರಬೇಕು" ಎಂದು ಆಯೋಗದ ಹೇಳಿದೆ.

"ಇತರ ರಾಜಕೀಯ ಪಕ್ಷಗಳ ಟೀಕೆಗಳನ್ನು ಮಾಡಿದಾಗ, ಅವರ ನೀತಿಗಳು ಮತ್ತು ಕಾರ್ಯಕ್ರಮಗಳು, ಹಿಂದಿನ ದಾಖಲೆ ಮತ್ತು ಕೆಲಸಗಳಿಗೆ ಸೀಮಿತವಾಗಿರುತ್ತದೆ. ಪಕ್ಷಗಳು ಮತ್ತು ಅಭ್ಯರ್ಥಿಗಳು ಇತರ ಪಕ್ಷಗಳ ನಾಯಕರು ಅಥವಾ ಕಾರ್ಯಕರ್ತರ ಸಾರ್ವಜನಿಕ ಚಟುವಟಿಕೆಗಳೊಂದಿಗೆ ಸಂಪರ್ಕ ಹೊಂದಿಲ್ಲದ ಖಾಸಗಿ ಜೀವನದ ಎಲ್ಲಾ ಅಂಶಗಳ ಟೀಕೆಗಳಿಂದ ದೂರವಿರಬೇಕು. ಪರಿಶೀಲಿಸದ ಆರೋಪಗಳು ಅಥವಾ ತಿರುಚುವಿಕೆಯ ಆಧಾರದ ಮೇಲೆ ಇತರ ಪಕ್ಷಗಳು ಅಥವಾ ಅವರ ಕಾರ್ಯಕರ್ತರ ಟೀಕೆಗಳನ್ನು ತಪ್ಪಿಸಬೇಕು" ಎಂದು ಆಯೋಗ ಎಚ್ಚರಿಕೆ ನೀಡಿದೆ.

ನೀತಿ ಸಂಹಿತೆಯ ಕೈಪಿಡಿಯು ಪ್ಯಾರಾ 3.8.2 (ಬಿ) ನಲ್ಲಿ, "ಯಾವುದೇ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಬಾರದು ಅಥವಾ ಯಾವುದೇ ವ್ಯಕ್ತಿಯ ವೈಯಕ್ತಿಕ ಜೀವನದ ಮೇಲೆ ಆಕ್ರಮಣ ಮಾಡುವ ಯಾವುದೇ ಹೇಳಿಕೆಗಳನ್ನು ನೀಡಬಾರದು. ದುರುದ್ದೇಶಪೂರಿತ ಅಥವಾ ಆಕ್ಷೇಪಾರ್ಹ ಸಭ್ಯತೆ ಮತ್ತು ನೈತಿಕತೆಯ ಹೇಳಿಕೆಗಳನ್ನು ನೀಡಬಾರದು" ಎನ್ನುತ್ತದೆ.

ದೇಶಾದ್ಯಂತ ರಾಜಕೀಯ ಚರ್ಚೆಯ ಗುಣಮಟ್ಟ ಕುಸಿಯುತ್ತಿರುವ ಕುರಿತು ಕೇಂದ್ರ ಚುನಾವಣಾ ಸಮಿತಿಯು ಹೀಗೆ ಹೇಳಿದೆ, "ಇತರ ಪಕ್ಷಗಳ ನಾಯಕರು ಅಥವಾ ಕಾರ್ಯಕರ್ತರ ಸಾರ್ವಜನಿಕ ಚಟುವಟಿಕೆಗಳೊಂದಿಗೆ ಸಂಪರ್ಕ ಹೊಂದಿಲ್ಲದ ಖಾಸಗಿ ಜೀವನದ ಯಾವುದೇ ಅಂಶವನ್ನು ಟೀಕಿಸಲಾಗುವುದಿಲ್ಲ. ಪ್ರತಿಸ್ಪರ್ಧಿಗಳನ್ನು ಅವಮಾನಿಸಲು ಕೆಳಮಟ್ಟದ ವೈಯಕ್ತಿಕ ದಾಳಿಗಳನ್ನು ಮಾಡಬಾರದು" ಎಂದಿದೆ.

## ಶಾ ವಿರುದ್ಧ ಕೇಜ್ರಿವಾಲ್ ವಾಗ್ದಾಳಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ



'ಅಮಿತ್ ಶಾ ಅವರು ಪ್ರಧಾನಿ ನರೇಂದ್ರ ಮೋದಿ ಅವರ ಉತ್ತರಾಧಿಕಾರಿಯಾಗಿ ಆಯ್ಕೆಯಾದ ಕಾರಣ ಅವರು ಅಹಂಕಾರಿಯಾಗಿದ್ದಾರೆ' ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ವಾಗ್ದಾಳಿ ನಡೆಸಿರುವ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್, "ರಾಷ್ಟ್ರ ರಾಜಧಾನಿಯಲ್ಲಿ ನಡೆದ ರ್‍ಯಾಲಿಯಲ್ಲಿ ಬಿಜೆಪಿ ನಾಯಕ ಅಮಿತ್ ಶಾ ದೆಹಲಿಯ ಜನರನ್ನು ಪಾಕಿಸ್ತಾನಿಗಳು ಎಂದು ಕರೆದಿದ್ದಾರೆ" ಎಂದು ಹೇಳಿದ್ದಾರೆ.

ಅಮಿತ್ ಶಾ ರ್‍ಯಾಲಿಗೆ 500 ಕ್ಕಿಂತ ಕಡಿಮೆ ಜನರು ಬಂದಿದ್ದರು ಎಂದು ಅರವಿಂದ್ ಕೇಜ್ರಿವಾಲ್ ಹೇಳಿದ್ದಾರೆ.

"ನಿನ್ನೆ ಅಮಿತ್ ಶಾ ಅವರು ದೆಹಲಿಗೆ ಬಂದಿದ್ದರು ಮತ್ತು ಅವರ ಸಾರ್ವಜನಿಕ ಸಭೆಯಲ್ಲಿ 500 ಕ್ಕಿಂತ ಕಡಿಮೆ ಜನರು ಹಾಜರಿದ್ದರು. ದೆಹಲಿಗೆ ಬಂದ ನಂತರ ಅವರು ದೇಶದ ಜನರನ್ನು ನಿಂದಿಸಲು ಪ್ರಾರಂಭಿಸಿದರು. ಆಮ್ ಆದ್ಮಿ ಪಕ್ಷದ (ಎಎಪಿ) ಬೆಂಬಲಿಗರು ಪಾಕಿಸ್ತಾನಿಗಳು ಎಂದು ಹೇಳಿದರು" ಎಂದು ಆರೋಪ ಮಾಡಿದ್ದಾರೆ.

"ನಾನು ಅವರನ್ನು ಕೇಳಲು ಬಯಸುತ್ತೇನೆ, ದೆಹಲಿಯ ಜನರು ನಮಗೆ 62 ಸ್ಥಾನಗಳನ್ನು ನೀಡಿ, 56% ಮತಗಳನ್ನು ನೀಡಿ ನಮ್ಮ ಸರ್ಕಾರವನ್ನು ರಚಿಸಿದ್ದಾರೆ. ದೆಹಲಿಯ ಜನರು ಪಾಕಿಸ್ತಾನಿಗಳೇ? 117 ಸ್ಥಾನಗಳಲ್ಲಿ 92 ಸ್ಥಾನಗಳನ್ನು ಪಂಜಾಬ್‌ನ ಜನರು ನಮಗೆ ನೀಡಿದ್ದಾರೆ, ಜನರು ಗುಜರಾತ್, ಗೋವಾ, ಉತ್ತರ ಪ್ರದೇಶ, ಅಸ್ಸಾಂ, ಮಧ್ಯಪ್ರದೇಶ ಮತ್ತು ದೇಶದ ಅನೇಕ ಭಾಗಗಳ ಜನರು ನಮಗೆ ಪ್ರೀತಿ ಮತ್ತು ವಿಶ್ವಾಸವನ್ನು ನೀಡಿದ್ದಾರೆ, ಈ ದೇಶದ ಜನರೆಲ್ಲರೂ ಪಾಕಿಸ್ತಾನಿಗಳೇ" ಎಂದು ಅವರು ಅಮಿತ್ ಶಾ ಅವರನ್ನು ಪ್ರಶ್ನಿಸಿದ್ದಾರೆ.

ಅಮಿತ್ ಶಾ ದೆಹಲಿಯ ಜನರನ್ನು ನಿಂದಿಸಿದ್ದಾರೆ ಎಂದು ಅರವಿಂದ್ ಕೇಜ್ರಿವಾಲ್ ಹೇಳಿದ್ದಾರೆ. ದಕ್ಷಿಣ ದೆಹಲಿಯಲ್ಲಿ ನಡೆದ ರ್‍ಯಾಲಿಯಲ್ಲಿ, ಶಾ ಅವರು ಕೇಜ್ರಿವಾಲ್ ಮತ್ತು ರಾಹುಲ್ ಗಾಂಧಿ ಅವರು ಭಾರತಕ್ಕಿಂತ ಪಾಕಿಸ್ತಾನದಲ್ಲಿ ಹೆಚ್ಚಿನ ಬೆಂಬಲವನ್ನು ಹೊಂದಿರುವ ಅಂತಹ ನಾಯಕರು ಎಂದು ಹೇಳಿದರು.

"ಪ್ರಧಾನಿ ಮೋದಿಯವರು ನಿಮ್ಮನ್ನು ತಮ್ಮ ಉತ್ತರಾಧಿಕಾರಿಯನ್ನಾಗಿ ಆಯ್ಕೆ ಮಾಡಿದ್ದಾರೆ. ನೀವು ಈ ಬಗ್ಗೆ ಹೆಮ್ಮೆ ಪಟ್ಟಿದ್ದೀರಿ, ನೀವು ಜನರನ್ನು ನಿಂದಿಸಲು ಮತ್ತು ಬೆದರಿಕೆ ಹಾಕಲು ಪ್ರಾರಂಭಿಸಿದ್ದೀರಿ. ನೀವು ಇನ್ನೂ ಪ್ರಧಾನಿ ಮೋದಿ ಆಗಿಲ್ಲ ಮತ್ತು ನೀವು ತುಂಬಾ ಸೊಕ್ಕಿನಿಂದಿದ್ದೀರಿ. ಜೂನ್ 4 ರಂದು ಜನರು ಬಿಜೆಪಿ ಸರ್ಕಾರವನ್ನು ರಚಿಸುತ್ತಿಲ್ಲ" ಎಂದು ಅವರು ಹೇಳಿದರು.


"ಐದನೇ ಹಂತದ ಲೋಕಸಭೆ ಚುನಾವಣೆ ನಡೆದಿದೆ. ಚುನಾವಣೆಗಳು ನಡೆಯುತ್ತಿದ್ದು, ಜೂನ್ 4 ಸಮೀಪಿಸುತ್ತಿರುವಂತೆಯೇ ಬಿಜೆಪಿಯನ್ನು ಸೋಲಿಸಲಾಗುವುದು ಎಂದು ನಾನು ಹೇಳಬಲ್ಲೆ. ಸಮೀಕ್ಷೆಯ ಫಲಿತಾಂಶಗಳ ಪ್ರಕಾರ, ಇಂಡಿಯಾ ಮೈತ್ರಿಕೂಟ 300ಕ್ಕೂ ಹೆಚ್ಚು ಸ್ಥಾನಗಳನ್ನು ಪಡೆಯುತ್ತಿದೆ" ಎಂದು ವಿಶ್ವಾಸ ವ್ಯಕ್ತಪಡಿಸಿದರು.

## ಕಟ್ಟಡ ಕಾರ್ಮಿಕರ ವಿವಿಧ ಸೌಲಭ್ಯಗಳ ಮಾಹಿತಿ ಬಹಿರಂಗಕ್ಕೆ ಒತ್ತಾಯ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕಟ್ಟಡ ಕಾರ್ಮಿಕರಿಗೆ ಮಂಜೂರಾದ ವಿವಿಧ ಸೌಲಭ್ಯಗಳ ಪಟ್ಟಿ ಹಾಗೂ ಲ್ಯಾಪ್‌ಟಾಪ್ ವಿತರಣೆ ಮಾಡಿದ ಮಾಹಿತಿ ಬಹಿರಂಗಪಡಿಸಲು ಕರ್ನಾಟಕ ರಾಜ್ಯ ಕಟ್ಟಡ ಕಟ್ಟುವ ಮತ್ತು ಕಲ್ಲು ಒಡೆಯುವ ಕ್ವಾರಿ ಕಾರ್ಮಿಕರ ಸಂಘ (ಎಐಟಿಯುಸಿ) ಹಾಗೂ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಫೆಡರೇಶನ್ (ಸಿಐಟಿಯು) ಒತ್ತಾಯಿಸಿದೆ.

ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಕಾರ್ಮಿಕ ಅಧಿಕಾರಿ ಸುಧಾ ಗರಗ ಅವರಿಗೆ ಮನವಿ ಪತ್ರ ಸಲ್ಲಿಸಿ, 2023 ಸೆಪ್ಟೆಂಬರ್‌ನಿಂದ 2024ರ



ಮೇ 16ರವರೆಗೆ ಎಲ್ಲಾ ಕಟ್ಟಡ ಕಾರ್ಮಿಕರಿಗೆ ಮಂಜೂರಾದ ವಿವಿಧ ಸೌಲಭ್ಯಗಳು ಮತ್ತು ವಿತರಣೆಯಾದ ಲ್ಯಾಪ್‌ಟಾಪ್‌ಗಳ ಪಟ್ಟಿ ಪಾರದರ್ಶಕತೆಯನ್ನು ಕಾಪಾಡಿಕೊಳ್ಳಲು ಸಂಘಟನೆಗಳಿಗೆ ಮಾಹಿತಿ ನೀಡಲು ಕೋರಿದರು.

ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಫೆಡರೇಶನ್ (ಸಿಐಟಿಯು) ಜಿಲ್ಲಾ ಅಧ್ಯಕ್ಷ ಖಾಸಿಮ್ ಸರ್ದಾರ್ ಹಾಗೂ ಕರ್ನಾಟಕ ರಾಜ್ಯ ಕಟ್ಟಡ ಕಟ್ಟುವ ಮತ್ತು ಕಲ್ಲು ಒಡೆಯುವ ಕ್ವಾರಿ ಕಾರ್ಮಿಕರ ಸಂಘ (ಎಐಟಿಯುಸಿ) ಜಿಲ್ಲಾ ಸಂಚಾಲಕ ಎಸ್.ಎ. ಗಫಾರ್, ಜಿಲ್ಲಾ ಸಂಘಟನಾ ಸಂಚಾಲಕ ತುಕಾರಾಮ್ ಬಿ.ಪಾತ್ರೋಟಿ, ತಾಲೂಕಾ ಸಂಚಾಲಕ ನೂರ್ ಸಾಬ್ ಹೊಸಮನಿ, ಗಿಣಿಗೇರಾ ಗ್ರಾಮ ಘಟಕದ ಅಧ್ಯಕ್ಷ ರಾಜಪ್ಪ ಚೌಹಾಣ್ ಮುಂತಾದವರು ಇದ್ದರು.

## ಶಿಥಿಲ ಕೊಠಡಿಗಳ ನಿರ್ಮಾಣಕ್ಕೆ ಕ್ರಮ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮುಳಗುಂದ ಕ್ಲಸ್ಟರ್ ವ್ಯಾಪ್ತಿಯ ಶಾಲೆಗಳ ಶಿಥಿಲ ಕೊಠಡಿಗಳ ಸಂಪೂರ್ಣ ಅಭಿವೃದ್ಧಿ ಪಡಿಸಲಾಗುವುದು ಎಂದು ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಹೇಳಿದರು.

ಅವರು ಪಟ್ಟಣದ ಸರಕಾರಿ ಕನ್ನಡ ಹೆಣ್ಣು ಮಕ್ಕಳ ಶಾಲೆಗೆ ಭೇಟಿ ನೀಡಿ, ಶಾಸಕರ ವಿಶೇಷ



ಅಭಿವೃದ್ಧಿ ಅನುದಾನದಡಿ 5 ಲಕ್ಷ ರೂಪಾಯಿ ಅನುದಾನದಲ್ಲಿನಿಮಾ ರ್ಣಗೊಳ್ಳುತ್ತಿರುವ ಶಾಲಾ ಕೊಠಡಿ ಕಾಮಗಾರಿಯನ್ನು ಪರಿಶೀಲಿಸಿ ಮಾತನಾಡಿ, ಗದಗ ಗ್ರಾಮೀಣ ವ್ಯಾಪ್ತಿಯ ಶಿಥಿಲ ಕೊಠಡಿಗಳ ಮಾಹಿತಿನ್ನು ಈಗಾಗಲೇ ಮೇಲಾಧಿಕಾರಿಗಳಿಗೆ ಕಳುಹಿಸಲಾಗಿದ್ದು, ಅನುದಾನ ಬಂದ ತಕ್ಷಣ ಎಲ್ಲಾ ಕೊಠಡಿಗಳನ್ನು ಅಭಿವೃದ್ಧಿಗೊಳಿ ಸಲಾಗುವುದು ಎಂದರು.

ಸಿಆರ್‌ಪಿ ಎಂ.ಎಂ. ನಿಂಬನಾಯ್ಕರ್, ಪ್ರಧಾನ ಗುರು ಸಂಗಮೇಶ ತಮ್ಮನಗೌಡರ, ಪಿ.ಬಿ. ಕೆಂಚನಗೌಡರ, ಪಿ.ಎಸ್. ಮರಿದೇವರಮಠ, ಎಸ್‌ಡಿಎಂಸಿ ಅಧ್ಯಕ್ಷ ಮಾಹಾಂತೇಶ ಕಣವಿ ಇದ್ದರು.

